ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 194

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶನಿವಾರ: 11-07-2026

# ಖಾಯಂ ದೃಢೀಕರಣ ಪತ್ರ ಕೊಡುವ ಹಕ್ಕಿದೆ

**ಬೆಂಗಳೂರು, ಜು. 10–** ರಾಜ್ಯ ಸರ್ಕಾರಕ್ಕೆ ಖಾಯಂ ವಾಸ ದೃಢೀಕರಣ ಪ್ರಮಾಣ ಪತ್ರ ಕೊಡುವ ಹಕ್ಕಿದೆ ಎಂದು ಗೃಹ ಸಚಿವ ಪ್ರಿಯಾಂಕ ಖರ್ಗೆ ಹೇಳಿದರು

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ನಿಯಮ ಮಾಡಲು ಆದೇಶ ಹೊರಡಿಸಲು ಅವಕಾಶವಿದೆ. ಶಾಸಕರು ಅಂದರೆ ಶಾಸನ ಮಾಡುವುದು. ಅದರಂತೆ ಶಾಸನ ಮಾಡಿ ಸರ್ಕಾರಿ ಆದೇಶವನ್ನು ಹೊರಡಿಸುತ್ತೇವೆ ಎಂದರು.

ಖಾಯಂ ನಿವಾಸ ಪ್ರಮಾಣ ಪತ್ರವನ್ನು ಸರ್ಕಾರದಿಂದ ಕೊಡುತ್ತಿದ್ದೇವೆ. ಕಾಂಗ್ರೆಸ್ ಪಕ್ಷದಿಂದ ಕೊಡುತ್ತಿಲ್ಲ. ಸರ್ಕಾರದ ವ್ಯವಸ್ಥೆಯಡಿಯಲ್ಲೇ ಖಾಯಂ ವಾಸ ಪ್ರಮಾಣ ಪತ್ರ ನೀಡುವ ಹಕ್ಕು ನಮಗಿದೆ ಎಂದು ಅವರು ಪ್ರತಿಪಾದಿಸಿದರು.

ರಾಜ್ಯ ಸರ್ಕಾರ ಖಾಯಂ ವಾಸ ದೃಢೀಕರಣ ಪತ್ರ ನೀಡುತ್ತಿರುವುದರಿಂದ ಬಿಜೆಪಿಯವರಿಗೆ ಏನು ಸಮಸ್ಯೆಯಾಗುತ್ತಿದೆ ಎಂದು ಪ್ರಶ್ನಿಸಿದ ಅವರು, ಒಂದು ಕಡೆ ಎಸ್ಐಆರ್ ಮಾಸ್ಟರ್ ಸ್ಟ್ರೋಕ್ ಎಂದು ಬಿಜೆಪಿ ನಾಯಕರು ಹೇಳುತ್ತಾರೆ. ಎಸ್ಐಆರ್ ಪ್ರಕ್ರಿಯೆ ನಡೆಯುತ್ತಿರುವುದು ಅಕ್ರಮ ನಡೆದಿದೆ ಎಂದು ದೂರು ಕೊಡುತ್ತೀರಾ ನಿಮಗೆ ಎಸ್ಐಆರ್ ಬೇಕಾ, ಬೇಡವಾ ನಿರ್ಧರಿಸಿ



ಎಂದು ಪ್ರಿಯಾಂಕ ಖರ್ಗೆ ವಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಪಕ್ಷಕ್ಕಂತೂ ಎಸ್ಐಆರ್ ಬೇಕು. ನಮ್ಮ ನಿಲುವು ಸ್ಪಷ್ಟವಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ಆಗಲೇಬೇಕು. ಎಲ್ಲವೂ ಪಾರದರ್ಶಕವಾಗಿ ಆಗಬೇಕು. ಲೋಪಗಳು, ನ್ಯೂನ್ಯತೆಗಳನ್ನು ಸರಿಪಡಿಸಬೇಕು. ಎಸ್ಐಆರ್‌ಗೆ ನಮ್ಮ ಸಂಪೂರ್ಣ ಸಹಕಾರ ಇದೆ. ಇದನ್ನು ಮುಖ್ಯಮಂತ್ರಿಗಳು ಈಗಾಗಲೇ ಹೇಳಿದ್ದಾರೆ. ನಾವೂ ಸಹ ಎಸ್ಐಆರ್ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಜಾಹೀರಾತನ್ನು ಕೊಡುತ್ತಿದ್ದೇವೆ ಎಂದರು.ನಾಗರಿಕತ್ವ ಪುರಾವೆಗೆ ಯಾವ ದಾಖಲೆ ಇದೆ. ಪಾಸ್‌ಪೋರ್ ಆಧಾರ್ ಕಾರ್ಡ್ ಯಾವುದ್ನು ಮಾನ್ಯ ಮಾಡಲ್ಲ ಎಂದು ಆಯೋಗ ಹೇಳುತ್ತದೆ. ಹೀಗಾದರೆ ಹೇಗೆ. ಆಯೋಗ ಬಿಜೆಪಿಯ ಕಪಿಮುಷ್ಠಿಯಲ್ಲಿದೆ. ಬಿಜೆಪಿಯನ್ನು ಗೆಲ್ಲಿಸಲು ಮತದಾರರಪಟ್ಟಿಯಲ್ಲಿ ಇಷ್ಟ ಬಂದಂತೆ ಹೆಸರುಗಳನ್ನು ತೆಗೆಯಲಾಗುತ್ತಿದೆ ಎಂದು ದೂರಿದರು.

ಚುನಾವಣಾ ಆಯೋಗ ಒಂದು ಸಾಂವಿಧಾನಕ ಸಂಸ್ಥೆ. ಆದರೆ ಆಯೋಗ ಅಸಂವಿಧಾನಿಕವಾಗಿ ನಡೆಯುತ್ತಿದೆ ಎಂದು ಪ್ರಿಯಾಂಕ ಖರ್ಗೆ ದೂರಿದರು.

ರಾಮ ಮಂದಿರ ನಿರ್ಮಾಣ, ಪ್ರಾಣ ಪ್ರತಿಷ್ಠಾಪನೆ ಎಲ್ಲದರಲ್ಲೂ ಕ್ರೆಡಿಟ್ ತೆಗೆದುಕೊಂಡಂತಹ ಆರ್‌ಎಸ್‌ಎಸ್ ರಾಮಮಂದಿರ ದೇಣಿಗೆ ಕಳವು ಪ್ರಕರಣದಲ್ಲೂ ಗ್ರೇಡ್ ತೆಗೆದುಕೊಳ್ಳಲಿ ಎಂದರು.

ಆಯ್ಯೋದ್ಯ ರಾಮಮಂದಿರದ ಮುಖ್ಯಸ್ಥರು ವಿಹೆಚ್‌ಪಿಗೆ ಸೇರಿದವರು. ಈ ವಿಹೆಚ್‌ಪಿಯನ್ನು ಸ್ಥಾಪಿಸಿದವರೆ ಆರ್‌ಎಸ್‌ಎಸ್ ಮುಖಂಡರು. ಹೀಗಿರುವಾಗ ಕಳ್ಳತನದಲ್ಲೂ ಇವರಿಗೆ ಎಷ್ಟುಪಾಲು ಹೋಗಿದೆ ಎಲ್ಲವೂ ಬಹಿರಂಗ ಮಾಡಬೇಕು ಎಂದು ಪ್ರಿಯಾಂಕ ಖರ್ಗೆ ಒತ್ತಾಯಿಸಿದರು.

## ಗವಿಗಟ್ ಗ್ರಾಮಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು ರಾಜಾ ವೆಂಕಟಪ್ಪ ನಾಯಕ ಮಧ್ಯಪ್ರವೇಶ 20 ದಿನಗಳ ಸಮಸ್ಯೆಗೆ ಅಂತ್ಯ; ಟ್ರಾನ್ಸ್‌ಫಾರ್ಮರ್ ಒದಗಿಸಿದ ಅಧಿಕಾರಿಗಳು

ಧೈರ್ಯದ ದಾರಿ

**ಮಾನ್ವಿ :** ತಾಲೂಕಿನ ಗವಿಗಟ್ ಗ್ರಾಮದಲ್ಲಿ ಕಳೆದ ಸುಮಾರು 20 ದಿನಗಳಿಂದ ಟ್ರಾನ್ಸ್‌ಫಾರ್ಮರ್ ದೋಷದಿಂದ ವಿದ್ಯುತ್ ಸಂಪರ್ಕ ಸ್ಥಗಿತಗೊಂಡು ಗ್ರಾಮಸ್ಥರು ಹಾಗೂ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದರು. ಈ ಕುರಿತು ಗ್ರಾಮಸ್ಥರು ಮಾನ್ವಿ ನಿಕಟಪೂರ್ವ ಶಾಸಕ ರಾಜಾ ವೆಂಕಟಪ್ಪ ನಾಯಕ ದೊರೆ ಅವರ ಗಮನಕ್ಕೆ ತಂದ ಹಿನ್ನೆಲೆಯಲ್ಲಿ, ಅವರು ಗ್ರಾಮಸ್ಥರೊಂದಿಗೆ ಮಾನ್ವಿಯ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ (GESCOM) ಕಚೇರಿಗೆ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಗ್ರಾಮದ ವಿದ್ಯುತ್ ಸಮಸ್ಯೆಯ ಗಂಭೀರತೆಯನ್ನು ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟು, ತಕ್ಷಣವೇ ಹೊಸ ಟ್ರಾನ್ಸ್‌ಫಾರ್ಮರ್ (TC) ಒದಗಿಸಿ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಒತ್ತಾಯಿಸಿದರು. ರಾಜಾ ವೆಂಕಟಪ್ಪ ನಾಯಕ ಅವರ ಮನವಿಗೆ ಸ್ಪಂದಿಸಿದ ಅಧಿಕಾರಿಗಳು ಕೂಡಲೇ ಅಗತ್ಯ ಕ್ರಮ ಕೈಗೊಂಡು ಟ್ರಾನ್ಸ್‌ಫಾರ್ಮರ್ ಒದಗಿಸಿದ್ದು, ಗವಿಗಟ್ ಗ್ರಾಮಕ್ಕೆ ವಿದ್ಯುತ್ ಸಂಪರ್ಕ ಮರುಸ್ಥಾಪಿಸುವ ಕಾರ್ಯ ಆರಂಭಿಸಿದರು.



ಇದರಿಂದ ಹಲವು ದಿನಗಳಿಂದ ಕತ್ತಲಲ್ಲಿದ್ದ ಗ್ರಾಮಕ್ಕೆ ಮತ್ತೆ ವಿದ್ಯುತ್ ಸಂಪರ್ಕ ದೊರೆತಿದ್ದು, ಗ್ರಾಮಸ್ಥರು ಹಾಗೂ ರೈತರು ನೆಮ್ಮದಿಯ ನಿಟ್ಟುಸಿರು ಬಿಟ್ಟರು. ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಕಲ್ಪಿಸಿದ ರಾಜಾ ವೆಂಕಟಪ್ಪ ನಾಯಕ ದೊರೆ ಅವರಿಗೆ ಗ್ರಾಮಸ್ಥರು ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗವಿಗಟ್ ಗ್ರಾಮದ ಗ್ರಾಮಸ್ಥರು, ರೈತ ಬಂಧುಗಳು, ಮುಖಂಡರು ಹಾಗೂ ಜೆಸ್ಕಾಂ ಅಧಿಕಾರಿಗಳು ಉಪಸ್ಥಿತರಿದ್ದರು.

## ಮತದಾರರ ಪಟ್ಟಿ ನಿಖರತೆಗೆ ಸಹಕರಿಸಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್.



ಧೈರ್ಯದ ದಾರಿ

**ರಾಯಚೂರು ಜುಲೈ 10:** ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸುವ ಮೂಲಕ ನಿಖರ ಮಾಹಿತಿ ನೀಡಬೇಕೆಂದು ರಾಯಚೂರು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಜುಲೈ 10ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಸಂಬಂಧ ಮತದಾರರ ಗಣತಿ ನಮೂನೆಗಳ ವಿತರಿಸಿರುವ ಕುರಿತು ಮಾಹಿತಿ ನೀಡಲು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಕರೆದ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಜುಲೈ 10ರ ಮಧ್ಯಾಹ್ನ 12ರ ವೇಳೆಗೆ ಶೇ.98.45ರಷ್ಟು ಪ್ರಗತಿ ಸಾಧಿಸಲಾಗಿದೆ. ಬಾಕಿ ಉಳಿದಿರುವ ಶೇ.1.55ರಷ್ಟು ಪ್ರಕರಣಗಳಲ್ಲಿ ಮರಣ ಹೊಂದಿದವರು, ಸ್ಥಳಾಂತರಗೊಂಡವರು ಹಾಗೂ ಮನೆಗೆ ಬೀಗ ಹಾಕಿ ಬೇರೆಡೆ ವಾಸಿಸುತ್ತಿರುವವರ ವಿವರಗಳಿದ್ದು, ಇವುಗಳನ್ನು ಸರಿಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ಜುಲೈ 10ರ ಅಂಕಿ-ಅಂಶಗಳ ಪ್ರಕಾರ ಜಿಲ್ಲೆಯ 17,14,559 ಮತದಾರರ ಪೈಕಿ ಈಗಾಗಲೇ 16,88,008 ಮತದಾರರರನ್ನು (ಶೇ.98.45) ಮ್ಯಾಪಿಂಗ್ ಮಾಡಲಾಗಿದೆ. ಬಾಕಿ ಉಳಿದ ಮತದಾರರ ವಿಳಾಸ ಪತ್ತೆಯಾಗುತ್ತಿಲ್ಲ. ಇವರು ಯಾರು ಮತ್ತು ಎಲ್ಲಿದ್ದಾರೆ ಎಂಬುದನ್ನು ಪತ್ತೆ ಹಚ್ಚಿ ಪಟ್ಟಿಯಿಂದ ತೆಗೆದುಹಾಕಲು ಅಥವಾ ಸರಿಪಡಿಸಲು ರಾಜಕೀಯ ಪಕ್ಷಗಳು ನೇಮಕ ಮಾಡಿರುವ ಬೂತ್ ಮಟ್ಟದ ಏಜೆಂಟರುಗಳು ನಮಗೆ ಸಂಪೂರ್ಣ ಮಾಹಿತಿ ನೀಡಿ ಸಹಕರಿಸಬೇಕಿದೆ. ಮರಣ ಹೊಂದಿದವರ ಡೆತ್ ಸರ್ಟಿಫಿಕೇಟ್ ಲಭ್ಯವಿದ್ದರೆ ಅಂಥವರ ಹೆಸರನ್ನು ಪಟ್ಟಿಯಿಂದ ತೆಗೆಯಲು ಸುಲಭವಾಗುತ್ತದೆ ಎಂದು ಹೇಳಿದರು.

ವಿಶೇಷವಾಗಿ ನಗರ ಹಾಗೂ ಗ್ರಾಮೀಣ 2ನೇಪುಟಕ್ಕೆ

# ವಿದ್ಯಾರ್ಥಿಗಳೊಂದಿಗೆ ಸಂವಾದದಿಂದ ರಿಮ್ಸ್ ಆಸ್ಪತ್ರೆವರೆಗೆ: ರಾಯಚೂರಿನಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಮಿಂಚಿನ ಪ್ರವಾಸ

### ಗುರಿ ಸಾಧಿಸಲು ನಿರಂತರ ಪ್ರಯತ್ನ, ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಒತ್ತು ಕಾಲೇಜು, ವಿದ್ಯಾರ್ಥಿನಿಯರ ವಸತಿ ನಿಲಯ, ಕೇಂದ್ರೀಯ ಬಸ್ ನಿಲ್ದಾಣ ಹಾಗೂ ರಿಮ್ಸ್ ಆಸ್ಪತ್ರೆ ಪರಿಶೀಲನೆ

ಧೈರ್ಯದ ದಾರಿ

**ರಾಯಚೂರು, ಜುಲೈ 10:** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಅವರು ಶುಕ್ರವಾರ ರಾಯಚೂರಿನಲ್ಲಿ ದಿನಪೂರ್ತಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಬಳಿಕ ಸರ್ಕಾರಿ ಮಾದರಿ ಪದವಿ ಕಾಲೇಜು ಕಟ್ಟಡ, ವಿದ್ಯಾರ್ಥಿನಿಯರ ವಸತಿ ನಿಲಯ, ಕೇಂದ್ರೀಯ ಬಸ್ ನಿಲ್ದಾಣ ಹಾಗೂ ರಿಮ್ಸ್ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ ಮೂಲಸೌಕರ್ಯ, ಮಹಿಳಾ ಸುರಕ್ಷತೆ ಮತ್ತು ಸಾರ್ವಜನಿಕ ಸೇವೆಗಳ ಕುರಿತು ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ನಡೆದ ವಿದ್ಯಾರ್ಥಿ□ವಿದ್ಯಾರ್ಥಿನಿಯರ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉತ್ತಮ ಶಿಕ್ಷಣದೊಂದಿಗೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಜೀವನದಲ್ಲಿ ಸ್ಪಷ್ಟ ಗುರಿ ಹೊಂದಬೇಕು. ಆ ಗುರಿ ಸಾಧಿಸಲು ನಿರಂತರ ಪರಿಶ್ರಮ, ಆತ್ಮವಿಶ್ವಾಸ ಮತ್ತು ಶಿಸ್ತು ಅಗತ್ಯ ಎಂದು ಹೇಳಿದರು.

ವಿದ್ಯಾರ್ಥಿಗಳು ಪ್ರತಿದಿನ ಪತ್ರಿಕೆಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಸಮಾಜದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ಅರಿವು ಹೊಂದಬೇಕು. ಜ್ಞಾನವನ್ನು ಸಂಪಾದಿಸಿದವರೇ ಸಮಾಜದ ಮುನ್ನಡೆಯನ್ನು ನಿರ್ಧರಿಸುತ್ತಾರೆ. ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಬಸವಣ್ಣ ಅವರು ಸಮಾಜದಲ್ಲಿ ಸಮಾನತೆ ಹಾಗೂ ಮಹಿಳಾ ಸಬಲೀಕರಣಕ್ಕಾಗಿ ಹೋರಾಡಿದ ಮಹನೀಯರು. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮೊಬೈಲ್ ಹಾಗೂ ಇಂಟರ್ನೆಟ್ ಬಳಕೆಯಲ್ಲಿ ವಿದ್ಯಾರ್ಥಿಗಳು ವಿಶೇಷ ಎಚ್ಚರಿಕೆ ವಹಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಅಪರಿಚಿತರೊಂದಿಗೆ ಸ್ನೇಹ ಬೆಳೆಸಬಾರದು. ಬ್ಲಾಕ್‌ಮೇಲ್,





ಸೈಬರ್ ಅಪರಾಧ ಅಥವಾ ಯಾವುದೇ ರೀತಿಯ ಕಿರುಕುಳ ಎದುರಾದರೆ ತಕ್ಷಣ ಪಾಲಕರಿಗೆ, ಶಿಕ್ಷಕರಿಗೆ ಹಾಗೂ ಪೊಲೀಸರಿಗೆ ಮಾಹಿತಿ ನೀಡಬೇಕು. ಮಹಿಳಾ ಪೊಲೀಸ್ ಠಾಣೆ, ಮಹಿಳಾ ಸಹಾಯವಾಣಿ ಸೇರಿದಂತೆ ಸರ್ಕಾರದ ವಿವಿಧ ಸಹಾಯವಾಣಿಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಂವಾದದ ವೇಳೆ ಗ್ರಾಮೀಣ ಭಾಗದಿಂದ ಆಗಮಿಸಿದ ವಿದ್ಯಾರ್ಥಿನಿಯರು ತಮ್ಮ ಊರುಗಳಿಗೆ ಸಮರ್ಪಕ ಬಸ್ ವ್ಯವಸ್ಥೆ ಇಲ್ಲದ ಕಾರಣ ಅನೇಕ ಬಾರಿ ನಡೆದುಕೊಂಡೇ ಮನೆಗೆ ತೆರಳಬೇಕಾಗುತ್ತದೆ ಎಂದು ಅಳಲು ತೋಡಿಕೊಂಡರು. ಇದಕ್ಕೆ ಸ್ಪಂದಿಸಿದ ಡಾ. ನಾಗಲಕ್ಷ್ಮೀ ಚೌಧರಿ ಅವರು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ವಿಷಯ ತಂದು ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ವಿದ್ಯಾರ್ಥಿಗಳೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿದ ಅವರು, ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳೊಂದಿಗೆ ಸೆಲ್ಫಿ ತೆಗೆದುಕೊಂಡು ಅವರಲ್ಲಿ ಹೊಸ ಉತ್ಸಾಹ ತುಂಬಿದರು.

**ಸರ್ಕಾರಿ ಮಾದರಿ ಪದವಿ ಕಾಲೇಜು ಕಟ್ಟಡ ಪರಿಶೀಲನೆ:**

ನಂತರ ಸಿದ್ರಾಂಪುರದಲ್ಲಿರುವ 12 ಕೋಟಿ ರೂ. ವೆಚ್ಚದಲ್ಲಿ ರಾಷ್ಟ್ರೀಯ ಉಚ್ಚತರ ಶಿಕ್ಷಣ ಅಭಿಯಾನ 2ನೇಪುಟಕ್ಕೆ





ಮೊದಲನೇ ಪುಟದಿಂದ

# ವಿದ್ಯಾರ್ಥಿಗಳೊಂದಿಗೆ ಸಂವಾದದಿಂದ ರಿಮ್ಸ್ ಆಸ್ಪತ್ರೆವರೆಗೆ: ರಾಯಚೂರಿನಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಮಿಂಚಿನ ಪ್ರವಾಸ

(ರುಸಾ) ಅನುದಾನದಡಿ ನಿರ್ಮಾಣಗೊಂಡಿರುವ ನೂತನ ಸರ್ಕಾರಿ ಮಾದರಿ ಪದವಿ ಕಾಲೇಜು ಕಟ್ಟಡಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಕಾಲೇಜು ಕಟ್ಟಡ ಪೂರ್ಣಗೊಂಡಿದ್ದರೂ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದ ಅವರು, ಯಾವುದೇ ಕಟ್ಟಡ ನಿರ್ಮಾಣಕ್ಕೂ ಮುನ್ನ ಮೂಲಭೂತ ಸೌಲಭ್ಯಗಳನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿನಿಯರು ಉನ್ನತ ಶಿಕ್ಷಣಕ್ಕಾಗಿ ನಗರಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ನಿರ್ಮಿಸಿರುವ ಮೂಲಸೌಕರ್ಯಗಳು ಸಂಪೂರ್ಣವಾಗಿ ಬಳಸುವಂತಿರಬೇಕು. ನೀರು ಸೇರಿದಂತೆ ಯಾವುದೇ ಮೂಲಭೂತ ಸಮಸ್ಯೆ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಡ್ಡಿಯಾಗಬಾರದು ಎಂದು ತಿಳಿಸಿದರು.

ವಿದ್ಯಾರ್ಥಿನಿಯರ ವಸತಿ ನಿಲಯಕ್ಕೂ ಭೇಟಿ

ಕಾಲೇಜು ಆವರಣದಲ್ಲಿರುವ ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ಅಲ್ಲಿನ ಕೊಠಡಿಗಳು, ಕುಡಿಯುವ ನೀರು, ಶೌಚಾಲಯ ಹಾಗೂ ಭದ್ರತಾ ವ್ಯವಸ್ಥೆಗಳನ್ನು ಪರಿಶೀಲಿಸಿದರು. ವಿದ್ಯಾರ್ಥಿನಿಯರಿಗೆ ಸುರಕ್ಷಿತ ವಾತಾವರಣ ಒದಗಿಸುವುದು ಅತ್ಯಂತ ಮುಖ್ಯ. ವಸತಿ ನಿಲಯದ ಸುತ್ತ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳ ಬಗ್ಗೆ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಪೊಲೀಸ್ ಭದ್ರತೆ ಬಲಪಡಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಬಾಕಿ ಉಳಿದಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಕೇಂದ್ರೀಯ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ

ಬಳಿಕ ರಾಯಚೂರಿನ ಕೇಂದ್ರೀಯ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿ ಸಿಸಿಟಿವಿ ವ್ಯವಸ್ಥೆ, ಮಹಿಳಾ ಹಾಗೂ ಮಕ್ಕಳ ಸಹಾಯವಾಣಿ ಫಲಕಗಳು, ಕುಡಿಯುವ ನೀರಿನ ಘಟಕ, ಮಹಿಳೆಯರ ನಿರೀಕ್ಷಣಾ ಕೊಠಡಿ ಹಾಗೂ ತಾಯಿ□ಮಗು ಹಾಲುಣಿಸುವ ಕೊಠಡಿಯನ್ನು ಪರಿಶೀಲಿಸಿದರು. ಪ್ರಯಾಣಿಕರಿಗೆ ವಿಶೇಷವಾಗಿ ಮಹಿಳೆಯರಿಗೆ ಅಗತ್ಯವಿರುವ ಮೂಲಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಸೂಚಿಸಿದರು.

ಶೌಚಗೃಹಗಳಲ್ಲಿ ಅಧಿಕ ಶುಲ್ಕ ವಸೂಲಿ ಹಾಗೂ ನಿರ್ಲಕ್ಷ್ಯದ ಕುರಿತು ದೂರುಗಳು ಬರುತ್ತಿರುವ ಹಿನ್ನೆಲೆಯಲ್ಲಿ ಕೂಡಲೇ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಸಮಸ್ಯೆ ಮುಂದುವರಿದರೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಹೇಳಿದರು.

ರಿಮ್ಸ್ ಆಸ್ಪತ್ರೆಯಲ್ಲಿ ಆರೋಗ್ಯ ಸೇವೆಗಳ ಪರಿಶೀಲನೆ

ನಂತರ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ವಿವಿಧ ವಾರ್ಡ್‌ಗಳು, ಬಾಣಂತಿಯರ ವಿಭಾಗ, ರಕ್ತ ನಿಧಿ ಕೇಂದ್ರ, ದಂತ ವಿಭಾಗ, ಕ್ಷ-ಕಿರಣ, ಅಲ್ಟ್ರಾಸೌಂಡ್ ಹಾಗೂ ಔಷಧ ವಿತರಣಾ ಕೇಂದ್ರಗಳನ್ನು ಪರಿಶೀಲಿಸಿದರು. ರೋಗಿಗಳೊಂದಿಗೆ ನೇರವಾಗಿ ಮಾತನಾಡಿ ಚಿಕಿತ್ಸೆ, ಔಷಧ ಲಭ್ಯತೆ ಹಾಗೂ ಆಸ್ಪತ್ರೆಯ ಸೇವೆಗಳ ಕುರಿತು ಮಾಹಿತಿ ಪಡೆದರು.

ಬಾಣಂತಿಯರಿಗೆ ಉತ್ತಮ ಚಿಕಿತ್ಸೆ ಹಾಗೂ ಆರೈಕೆ ದೊರೆಯಬೇಕು. ಆಸ್ಪತ್ರೆಯಲ್ಲಿ ಅಗತ್ಯ ಔಷಧಿಗಳು ಲಭ್ಯವಿರಬೇಕು. ರೋಗಿಗಳು ಹೊರಗಡೆ ಔಷಧ ಖರೀದಿಸಬೇಕಾದ ಪರಿಸ್ಥಿತಿ ಬರಬಾರದು. ಆಸ್ಪತ್ರೆಯಲ್ಲಿ ಶುಚಿತ್ವ ಕಾಪಾಡುವುದರ ಜೊತೆಗೆ ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಯಂಕಣ್ಣ, ರಿಮ್ಸ್ ನಿರ್ದೇಶಕ ಡಾ. ರಮೇಶ್ ಬಿ.ಹೆಚ್., ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ವಿಜಯ ಶಂಕರ್, ವಿವಿಧ ಇಲಾಖೆಗಳ ಅಧಿಕಾರಿಗಳು, ವೈದ್ಯರು, ಸಿಬ್ಬಂದಿ, ಜನಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ನಿಖರತೆಗೆ ಸಹಕರಿಸಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್.

ಪ್ರದೇಶಗಳಲ್ಲಿ ಮತದಾರರನ್ನು ಗುರುತಿಸುವಲ್ಲಿ ಸ್ಥಳೀಯ ವಾರ್ಡ್ ಸದಸ್ಯರು, ಮಾಜಿ ಕೌನ್ಸಿಲರ್‌ಗಳು ಹಾಗೂ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರ ಪಾತ್ರ ದೊಡ್ಡದಾಗಿದೆ. ಪಕ್ಷಾತೀತವಾಗಿ ಇವರೆಲ್ಲರಿಗೂ ಸ್ಥಳೀಯ ಮತದಾರರ ಬಗ್ಗೆ ನಿಖರವಾದ ಮಾಹಿತಿ ಇರುತ್ತದೆ. ಆದ್ದರಿಂದ ತಕ್ಷಣವೇ ತಹಶೀಲ್ದಾರರು, ಇಒ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳ ನೇತೃತ್ವದಲ್ಲಿ ಸಭೆಗಳನ್ನು ಕರೆದು, ಮಹಜರು ಪ್ರಕ್ರಿಯೆಯ ಮೂಲಕ ನಿಖರ ಮಾಹಿತಿ ಪಡೆಯುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.
ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ಸಾಗುತ್ತಿದ್ದು, ಗಣತಿ ನಮೂನೆಗಳ ವಿತರಣೆಯಲ್ಲಿ ಇಡೀ ರಾಜ್ಯದಲ್ಲೇ ರಾಯಚೂರು ಜಿಲ್ಲೆಯು ಉತ್ತಮ ಸ್ಥಾನದಲ್ಲಿದೆ. ಯಾವುದೇ ಗೊಂದಲ, ವಿವಾದಗಳಿಗೆ ಆಸ್ಪದ ನೀಡದಂತೆ ಪಾರದರ್ಶಕವಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ಗಣತಿ ನಮೂನೆಗಳನ್ನು ಭರ್ತಿ ಮಾಡುವಾಗ ಸಾರ್ವಜನಿಕರಲ್ಲಿ ಉಂಟಾಗುವ ಗೊಂದಲಗಳನ್ನು ತಪ್ಪಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಫಾರ್ಮ್‌ಗಳಲ್ಲಿನ ಮೊದಲ ಭಾಗ ಹಾಗೂ ಎರಡನೇ ಭಾಗಗಳನ್ನು ಭರ್ತಿ ಮಾಡುವಾಗ ಆಗುವ ಸಾಮಾನ್ಯ ತಪ್ಪುಗಳನ್ನು ತಪ್ಪಿಸಲು ಬಿಎಲ್‌ಒ ಮತ್ತು ಬಿಎಲ್‌ಎಗಳಿಗೆ ವಿಶೇಷ ತರಬೇತಿ ನೀಡಲಾಗಿದೆ ಎಂದು ತಿಳಿಸಿದ ಅವರು, ಎಸ್‌ಐಆರ್ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಲಿಂಗಸುಗೂರು ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣೆ ಶಾಖೆಯ ಶಿರಸ್ತೇದಾರ ಋಷಿಕೇಶಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶೀಲ್ದಾರರು, ಚುನಾವಣೆ ಶಾಖೆಯ ಶಿರಸ್ತೇದಾರರು ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಸಭೆಯಲ್ಲಿ ಇದ್ದರು.

# ಫಾಸ್ಟರ್ ಕೇರ್‌ಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 10:** ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಬಾಲನ್ಯಾಯ ಕಾಯ್ದೆ-2015ರ ಸೆಕ್ಷನ್ (44)ರನ್ವಯ ಪೋಷಕತ್ವ ಯೋಜನೆಯಲ್ಲಿ ಗುರುತಿಸಲ್ಪಟ್ಟ ಮಕ್ಕಳು ಕುಟುಂಬದ ವಾತವರಣದಲ್ಲಿ ಬೆಳೆಯಲು ತಾತ್ಕಾಲಿಕವಾಗಿ ಅಥವಾ ವಿಸ್ತರಿಸಲ್ಪಟ್ಟ ಅವಧಿಗೆ ಮಕ್ಕಳನ್ನು ಪೋಷಕತ್ವ ಯೋಜನೆಯಡಿಯಲ್ಲಿ ಫಾಸ್ಟರ್ ಕೇರ್‌ಗೆ ಅರ್ಜಿ ಆಹ್ವಾನಿಸಲಾಗಿದೆ.

ಮಕ್ಕಳ ರಕ್ಷಣಾ ಘಟಕ ರಾಯಚೂರು ವತಿಯಿಂದ 0-18 ವರ್ಷದೊಳಗಿನ ಮಕ್ಕಳ ಪೋಷಣೆ ಮತ್ತು ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತದೆ. ಫಾಸ್ಟರ್ ಕೇರ್ (ಪೋಷಕತ್ವ) ಎಂದರೆ ಮಕ್ಕಳ ಕಲ್ಯಾಣ ಸಮಿತಿಯು ಮಗುವಿನ ರಕ್ಷಣೆಯನ್ನು ಜೈವಿಕ ಕುಟುಂಬವನ್ನು ಹೊರತುಪಡಿಸಿ, ಮತ್ತೊಂದು ಕೌಟುಂಬಿಕ ವಾತಾವರಣ ಹೊಂದಿರುವ ಪರ್ಯಾಯ ವ್ಯವಸ್ಥೆಯಲ್ಲಿ ಇರಿಸುವುದನ್ನು ಪೋಷಕತ್ವ ಎನ್ನಬಹುದು. ಈ ಪರ್ಯಾಯ ವ್ಯವಸ್ಥೆಯ ಮಕ್ಕಳ ಕಲ್ಯಾಣ ಸಮಿತಿಯಿಂದ ಆಯ್ಕೆ ಮಾಡಿ, ಅರ್ಹತೆ ಹೊಂದಿರುವ, ಅಂಗೀಕಾರ ಪಡೆದಿರುವ ಹಾಗೂ ಮಕ್ಕಳ ರಕ್ಷಣೆಯನ್ನು ಮೇಲ್ವಿಚಾರಣೆಗೆ ಒಳಪಡುವ ವ್ಯವಸ್ಥೆಯಾಗಿದೆ.

ರಾಯಚೂರು ಜಿಲ್ಲೆಯಲ್ಲಿ ಮಕ್ಕಳಿಲ್ಲದ ದಂಪತಿಗಳು, ಏಕ ಪೋಷಕ ಕುಟುಂಬಸ್ಥರು, ಮಕ್ಕಳಿಗೆ ಪೋಷಣೆ ಮತ್ತು ರಕ್ಷಣೆ ನೀಡಲು ಆಸಕ್ತಿ ಇರುವವರು ಈ ಕಚೇರಿಯ ವಿಳಾಸ: ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮನೆ ಸಂಖ್ಯೆ: 1-9-138, ಪಶ್ಚಿಮ ಪೊಲೀಸ್ ಠಾಣೆ ಹಿಂದೆ, ಮಾರಮ್ಮಗುಡಿ ಎದುರುಗಡೆ, ಗೋಲ್ ಮಾರ್ಕೆಟ್, ಆಜಾದ್ ನಗರ, ರಾಯಚೂರು-584101ಗೆ ಅರ್ಜಿ ಸಲ್ಲಿಸಬಹುದಾಗಿದೆ. ಅಥವಾ ದೂರವಾಣಿ ಸಂಖ್ಯೆ-08532-226226, 8618362385, 9731603295, 8660627793ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೊಯೋಲಾ ಸಮಾಜ ಸೇವಾ ಕೇಂದ್ರದಿಂದ ಗೃಹ ಕಾರ್ಮಿಕ ಮಹಿಳೆಯರಿಗೆ ಮಾಹಿತಿ ಕಾರ್ಯಾಗಾರ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಲೊಯೋಲಾ ಸಮಾಜ ಸೇವಾ ಕೇಂದ್ರದ ಸಭಾಂಗಣದಲ್ಲಿ ಲೊಯೋಲಾ ಸಮಾಜ ಸೇವಾ ಕೇಂದ್ರದ ವತಿಯಿಂದ ಆಯೋಜಿಸಿದ್ದ ಗೃಹ ಕಾರ್ಮಿಕ ಮಹಿಳೆಯರಿಗೆ ಅವರ ಹಕ್ಕುಗಳು ಹಾಗೂ ಸರ್ಕಾರದ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಲೊಯೋಲಾ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫಾ. ಸಿಪ್ರಿಯನ್ ಟೆಲ್ಲಿಸ್ ಮಾತನಾಡಿ ಗೃಹ ಕಾರ್ಮಿಕ ಮಹಿಳೆಯರು ಸಂಘಟಿತರಾದಲ್ಲಿ ಮಾತ್ರ ಸಾಮಾಜಿಕ ಭದ್ರತೆ, ನ್ಯಾಯಯುತ ವೇತನ, ಕೆಲಸದ ಭದ್ರತೆ, ಪಿಎಫ್, ಆರೋಗ್ಯ ವಿಮೆ, ವೇತನ ಸಹಿತ ರಜೆ ಸೇರಿದಂತೆ ಹಲವು ಮೂಲಭೂತ ಸೌಲಭ್ಯ ಸೇರಿದಂತೆ ತಮ್ಮ ಹಕ್ಕುಗಳನ್ನು ಹಾಗೂ ಸರಕಾರದ ಸೌಲಭ್ಯಗಳನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳು ಹಾಗೂ ಬೆಳಗಾವಿ ಗೃಹ ಕಾರ್ಮಿಕ ಮಹಿಳೆಯರ ಹಕ್ಕುಗಳ ಹೋರಾಟ ವೇದಿಕೆ ಸಂಘದ ಅಧ್ಯಕ್ಷರಾದ ಶೋಭಾ ಮಾತನಾಡಿ, ಭಾರತೀಯ ಸಂವಿಧಾನವು ಗೃಹ ಕಾರ್ಮಿಕ ಮಹಿಳ ಕಾರ್ಮಿಕರಿಗಾಗಿ ಹಲವು ಹಕ್ಕುಗಳನ್ನು ನೀಡಿದೆ ಹಾಗೂ ಕಾರ್ಮಿಕ ಇಲಾಖೆಯ ಮೂಲಕ ಗೃಹ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ಅಂಬೇಡ್ಕರ್ ಸಹಾಯಹಸ್ತ ಯೋಜನೆ ಸೇರಿದಂತೆ ವಿವಿಧ ಕಲ್ಯಾಣ ಯೋಜನೆಗಳ ಸೌಲಭ್ಯಗಳು ಲಭ್ಯವಿದ್ದು, ಅವುಗಳ ಬಗ್ಗೆ ಮಾಹಿತಿ ಪಡೆದಾಗ ಮಾತ್ರ ಅವುಗಳ ಲಾಭವನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ವೈಶಾಲಿ ಕಂಬಾರ ಅವರು ಕಾರ್ಮಿಕ ಇಲಾಖೆಯ ಮೂಲಕ ಗೃಹ ಕಾರ್ಮಿಕರಿಗೆ ದೊರೆಯುವ ಸೌಲಭ್ಯಗಳ ಮಾಹಿತಿಯನ್ನು ನೀಡಿದರು.

ಲೊಯೋಲಾ ಸಮಾಜ ಸೇವಾ ಕೇಂದ್ರದ ಸಹ ನಿರ್ದೇಶಕರಾದ ಫಾ. ಜಾರ್ಜ್ ಪಿಂಟೋ , ತಿಮ್ಮಲಮ್ಮ, ರವೀಂದ್ರ ಜಾನೇಕಲ್ ಸೇರಿದಂತೆ ಪಟ್ಟಣದ ಸೋನಿಯಾ ಗಾಂಧಿನಗರ, ಮಹಾತ್ಮಾ ಗಾಂಧಿನಗರ, ಅಮೃತ ಕಾಲೋನಿ, ಅಂಬೇಡ್ಕರ್ ನಗರ, ಮಾರುತಿ ನಗರ ಸೇರಿದಂತೆ ವಿವಿಧ ವಾರ್ಡಗಳ ಗೃಹ ಕಾರ್ಮಿಕ ಮಹಿಳೆಯರು ಭಾಗವಹಿಸಿದ್ದರು.

# ಜುಲೈ 15ರಂದು ನೇರ ಸಂದರ್ಶನ

**ರಾಯಚೂರು ಜುಲೈ 10:** ಜಿಲ್ಲೆಯ ದೇವದುರ್ಗದ ಬಸವ ಪದವಿ ಪೂರ್ವ ಹಾಗೂ ಪದವಿ ಮಹಾವಿದ್ಯಾಲಯದಲ್ಲಿ ಜುಲೈ 15ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.
ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.
ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.
ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.
ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9008211750, 8197930236ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ ಸರ್ಕಾರದಿಂದ ವಿಶ್ವಕರ್ಮ ಸಮಾಜಕ್ಕೆ ನಿರಂತರ ಅನ್ಯಾಯ


**ಕಲಬುರಗಿ,ಜು.10**-ಕಳೆದ ಹಲಾವರು ವರ್ಷಗಳಿಂದ ವಿಶ್ವಕರ್ಮ ಸಮಾಜವು ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ತರುವಲ್ಲಿ ಶ್ರಮವಹಿಸಿದೆ. ಅನೇಕ ಮುಖಂಡರುಗಳನ್ನು ವಿವಿಧ ಪಕ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಕರೆತಂದು ಯಾವುದೇ ಸ್ಥಾನ ಮಾನ ನೀಡದೇ ಮತ್ತು ವಿಶ್ವಕರ್ಮ ಸಮುದಾಯವನ್ನು ಕಡೆಗಣಿಸುತಿರುವ ಕಾಂಗ್ರೆಸ್ ಸರ್ಕಾರದ ನಡೆಯನ್ನು ವಿಶ್ವಕರ್ಮ ಹೋರಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ದೇವಿಂದ್ರ ದೇಸಾಯಿ ಕಲ್ಲೂರ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.
ಹೇಳಿಕೆಯೊಂದನ್ನು ಹೊರಡಿಸಿರುವ ಅವರು ಪಂಚ ಉದ್ಯೋಗದಿಂದ ದೇಶದ ಆರ್ಥಿಕತೆಗೆ ಬೆನ್ನೆಲುಬಾಗಿ ನಿಂತಿರುವ ವಿಶ್ವಕರ್ಮ ಸಮಾಜವು ಇಂದು ಅತ್ಯಂತ ಸೋಚನಿಯ ಸ್ಥಿತಿಯಲ್ಲಿ ನಿಂತಿದೆ. ಸಮುದಾಯದ ಜನರು ಆರ್ಥಿಕವಾಗಿ ದುರ್ಬಲರಾಗುತ್ತಿದ್ದಾರೆ. ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿಗಾಗಿ ನಿಗಮವನ್ನು ಸ್ಥಾಪನೆ ಮಾಡಲಾಗಿದೆ. ಆದರೆ ನಿಗಮಕ್ಕೆ ಬೇಕಾದ ಆರ್ಥಿಕ ನೆರವು ನೀಡುವಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಬೇಸರ ವ್ಯಕ್ತ ಪಡಿಸಲಾಗುತ್ತದೆ.



ಸಮಾಜದ ಮುಖಂಡರಾದ ಕೆ.ಪಿ. ನಂಜುಂಡಿಯವರನ್ನು ಕಾಂಗ್ರೆಸ್ ಪಕ್ಷಕ್ಕೆ ಕರೆತರಬೇಕಾದರೆ ಅವರನ್ನು ವಿಧಾನ ಪರಿಷತ್ತಗೆ ನೇಮಕ ಮಾಡಿಕೊಳ್ಳಲಾಗುವುದು ಎಂಬ ಭರವಸೆಯನ್ನು ನೀಡಿಲಾಗಿತ್ತು. ಆದರೆ ಕಳೆದ ಮೂರು ವರ್ಷಗಳಿಂದ ಕುರ್ಚಿ ಕಚ್ಚಾಟದಲ್ಲಿಯೇ ಕಾಂಗ್ರೆಸ್ ನಾಯಕರು ತಲ್ಲಿಣರಾಗಿರುವುದು ರಾಜ್ಯದ ದುರಾದೃಷ್ಟವಾಗಿದೆ. ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿರುವ ಡಿ. ಕೆ. ಶಿವಕುಮಾರ ಅವರು ಕೇವಲ ಪ್ರವಾಸದ ಸಿಎಂ ಎನ್ನಿಸಿಕೊಳ್ಳಬಾರದು. ಕಲ್ಯಾಣ ಕರ್ನಾಟಕ ಭಾಗದಲ್ಲಿ ರೈತರ ನೇರವಿಗೆ ಬರಬೇಕಾಗಿದ್ದಿ ಇತ್ತೀಚಿನ ಪ್ರಗತಿ ಸಭೆ ಯಾವುದೇ ನಿರ್ಣಯ ತೆಗೆದುಕೊಳ್ಳದೇ ನೋವಿನ ಸಂಗತಿಯಾಗಿದೆ.
ವಿಶ್ವಕರ್ಮ ಸಮಾಜದಿಂದ ಸರ್ಕಾರಕ್ಕೆ ಆರ್ಥಿಕವಾಗಿ ಬೆನ್ನೆಲುಬಾಗಿ ನಿಲ್ಲುತ್ತಿದೆ. ಆದರೆ ಸಮುದಾಯಕ್ಕೆ ಯಾವುದೇ ಆರ್ಥಿಕ ಬೆಂಬಲ ಇಲ್ಲದಂತಾಗಿದೆ. ಕೂಡಲೇ ವಿಶ್ವಕರ್ಮ ಸಮುದಾಯದ ಮುಖಂಡರನ್ನು ವಿಧಾನ ಪರಿಷತ್ ಸದಸ್ಯತ್ವ ಸ್ಥಾನಕ್ಕೆ ಆಯ್ಕೆ ಮಾಡಿಕೊಳ್ಳಬೇಕು. ವಿಶ್ವಕರ್ಮ ಅಭಿವೃದ್ಧಿ ನಿಗಮಕ್ಕೆ 500 ಕೋಟಿ ರೂ. ಬಿಡುಗಡೆ ಮಾಡಬೇಕು. ಬ್ಯಾಂಕ್‌ಗಳಿಂದ ಬಡ್ಡಿ ರಹಿತ ಸಾಲನವನ್ನು ನೀಡಲು ಕ್ರಮಕೈಗೊಳ್ಳಬೇಕು. ವಿಶ್ವಕರ್ಮ ಸಮುದಾಯಗಳಿಗೆ ಅವರ ಉದ್ಯೋಗದ ಮೇಲೆ ಸಲಕರಣೆಗಳನ್ನು ವಿತರಣೆ ಮಾಡಬೇಕು. ಕುಲಕಸಬುಗಳನ್ನು ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಸಮುದಾಯದ ಯುವಕರಿಗೆ ಉಚಿತ ನೀಡಬೇಕು ಎಂದು ಒತ್ತಾಯಿಸಲಾಗುತ್ತದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷವು ಕೂಡಲೆ ವಿಶ್ವಕರ್ಮ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯ ಸರಿಪಡಿಸದಿದ್ದರೆ ಸರ್ಕಾರದ ವಿರುದ್ಧ ಹೋರಟದ ದಾರಿ ಹಿಡಿಯಬೇಕಾಗುತ್ತಿದೆ ಎಂದು ದೇವಿಂದ್ರ ದೇಸಾಯಿ ಕಲ್ಲೂರ ಎಚ್ಚರಿಕೆ ನೀಡಿದ್ದಾರೆ.

# ಮುದ್ದೇಬಿಹಾಳದಲ್ಲಿ ಕಣ್ವಮಠದ ಶ್ರೀ ವಿದ್ಯಾಕಣ್ವವಿರಾಜ ತೀರ್ಥ ಶ್ರೀಗಳ ಚಾತುರ್ಮಾಸ ಆರಂಭ



**ಮುದ್ದೇಬಿಹಾಳ, ಜು.10:** ಕಣ್ವಮಠದ ಪೀಠಾಧಿಪತಿಗಳಾದ ಶ್ರೀ ವಿದ್ಯಾಕಣ್ವವಿರಾಜ ತೀರ್ಥ ಶ್ರೀಪಾದಂಗಳವರ ಈ ವರ್ಷದ ಚಾತುರ್ಮಾಸ ಕಾರ್ಯಕ್ರಮವು ಮುದ್ದೇಬಿಹಾಳದ ಶ್ರೀ ಚಿದಂಬರ ದೇವಸ್ಥಾನದಲ್ಲಿ ಆರಂಭಗೊಂಡಿದ್ದು, ಭಕ್ತರ ಸಕ್ರಿಯ ಭಾಗವಹಿಸುವಿಕೆಗೆ ಶ್ರೀಗಳು ಕರೆ ನೀಡಿದ್ದಾರೆ.

ಚಾತುರ್ಮಾಸದ ಅವಧಿಯಲ್ಲಿ ಪ್ರತಿದಿನ ವಿಶೇಷ ಪೂಜೆ, ಹಸ್ತೋದಕ ಸೇವೆ, ತೀರ್ಥಪ್ರಸಾದ, ಸಂಸ್ಥಾನ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನಡೆಯಲಿವೆ. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸುವ ಭಕ್ತರು ತನು-ಮನ-ಧನಗಳಿಂದ ಸೇವೆ ಸಲ್ಲಿಸಿ ಚಾತುರ್ಮಾಸವನ್ನು ಯಶಸ್ವಿಗೊಳಿಸಬೇಕೆಂದು ಶ್ರೀಗಳು ಮನವಿ ಮಾಡಿದ್ದಾರೆ.

ಈ ಬಾರಿ ಚಾತುರ್ಮಾಸದ ಅಂಗವಾಗಿ ವಿದ್ವಾಂಸರು ಹಾಗೂ ಪಂಡಿತರ ಪ್ರವಚನಗಳು, ಸಂಗೀತ ಸೇವೆ, ಭಜನೆ, ಕೋಲಾಟ ಸೇರಿದಂತೆ ಹಲವು ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಎಲ್ಲ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನಡೆಸಲು ಚಾತುರ್ಮಾಸ ಸಂಘಟನೆಯ ಪದಾಧಿಕಾರಿಗಳು ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದಾರೆ.

ಸಂಸ್ಥಾನ ಪೂಜೆ ಪ್ರತಿದಿನ ಸಾಂಗವಾಗಿ ನೆರವೇರುತ್ತಿದ್ದು, ಭಕ್ತರ ಆಗಮನ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಮಠದ ಅಭಿವೃದ್ಧಿಗೆ ಭಕ್ತರು ನಿರಂತರ ಸಹಕಾರ ನೀಡಬೇಕು ಹಾಗೂ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಧರ್ಮಕಾರ್ಯಕ್ಕೆ ಶೋಭೆ ತರಬೇಕು ಎಂದು ಶ್ರೀಗಳು ಕರೆ ನೀಡಿದರು. ಮಠದ ಕಾರ್ಯಾಧ್ಯಕ್ಷ ರಾಘವೇಂದ್ರ ಆಲಗೂರ ಹಾಗೂ ಅವರ ತಂಡದ ಸಹಕಾರವನ್ನು ಶ್ರೀಗಳು ಶ್ಲಾಘಿಸಿದರು.

ಇದೇ ವೇಳೆ ಹುಣಸಿಹೊಳೆಯ ಕಣ್ವಮಠದಲ್ಲಿ ಉಂಟಾಗಿದ್ದ ಕೆಲವು ಅನಾನುಕೂಲತೆಗಳನ್ನು ನಿವಾರಿಸಲು ಅನುಭವಿ ಪುರೋಹಿತರು ಹಾಗೂ ನುರಿತ ಅಡುಗೆ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು. ಯುಗಾದಿಯಿಂದ ಪ್ರತಿದಿನ ಶ್ರೀ ವಿಠಲಕೃಷ್ಣನ ಪೂಜೆ, ನೈವೇದ್ಯ ಹಾಗೂ ಬೃಂದಾವನಸ್ಥ ಯತಿಗಳ ಆರಾಧನಾ ಮಹೋತ್ಸವಗಳನ್ನು ಶ್ರದ್ಧಾಭಕ್ತಿಯಿಂದ ನಡೆಸಲಾಗುತ್ತಿದ್ದು, ಭಕ್ತರಿಗೆ ನಿತ್ಯ ತೀರ್ಥಪ್ರಸಾದದ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಶ್ರೀ ವಿದ್ಯಾಭಾಸ್ಕರ ತೀರ್ಥರ 11ನೇ ಆರಾಧನಾ ಮಹೋತ್ಸವ ಜುಲೈ 10ರಿಂದ 13ರವರೆಗೆ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಆರಾಧನೆ ಹಾಗೂ ನಿತ್ಯಪೂಜಾ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕೆಂದು ಮಠದ ಕಾರ್ಯಾಧ್ಯಕ್ಷ ರಾಘವೇಂದ್ರ ಆಲಗೂರ ಮನವಿ ಮಾಡಿದ್ದಾರೆ.

# ಪೊಲೀಸ್ ಠಾಣೆಯಲ್ಲೇ ಸ್ವಾಮೀಜಿಯ ಮೇಲೆ ಹಲ್ಲೆ: ಆರೋಪಿಗಳ ಬಂಧನಕ್ಕೆ ಆಗ್ರಹ




**ವಿಜಯಪುರ, ಜು.10:** ಚಿತ್ರದುರ್ಗ ಜಿಲ್ಲೆಯ ಐಮಂಗಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಶ್ರೀ ಹರಳಯ್ಯ ಸ್ವಾಮೀಜಿಯವರ ಮೇಲೆ ನಡೆದಿರುವ ಮಾರಣಾಂತಿಕ ಹಲ್ಲೆ ಹಾಗೂ ಬಳಿಕ ಪೊಲೀಸ್ ಠಾಣೆಯೊಳಗೆ ನುಗ್ಗಿ ಮತ್ತೊಮ್ಮೆ ಕೊಲೆ ಯತ್ನ ನಡೆಸಿರುವ ಘಟನೆ ಖಂಡನೀಯ ಎಂದು ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ) ವಿಜಯಪುರ ಜಿಲ್ಲಾಧ್ಯಕ್ಷ ನಾಗರಾಜ ಕಬಾಡೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪೊಲೀಸ್ ಠಾಣೆಯಂತಹ ಸುರಕ್ಷಿತ ಸ್ಥಳದಲ್ಲಿಯೇ ಧಾರ್ಮಿಕ ಮುಖಂಡರ ಜೀವಕ್ಕೆ ಅಪಾಯ ಉಂಟಾಗಿರುವುದು ಪೊಲೀಸ್ ಇಲಾಖೆಯ ಕಾರ್ಯ ವೈಖರಿಯ ವೈಫಲ್ಯವನ್ನು ತೋರಿಸುತ್ತದೆ. ಸಾರ್ವಜನಿಕರ ರಕ್ಷಣೆಯ ಹೊಣೆ ಹೊತ್ತಿರುವ ಇಲಾಖೆಯ ಮೇಲಿನ ಜನರ ವಿಶ್ವಾಸಕ್ಕೆ ಧಕ್ಕೆ ತರುವಂತಹ ಈ ಘಟನೆ ರಾಜ್ಯದ ಕಾನೂನು ಸುವ್ಯವಸ್ಥೆಗೆ ಕಪ್ಪುಚುಕ್ಕೆಯಾಗಿದೆ ಎಂದು ಹೇಳಿದರು.

ಹಲ್ಲೆ ನಡೆಸಿದ ಎಲ್ಲ ಆರೋಪಿಗಳನ್ನು ಕೂಡಲೇ ಬಂಧಿಸಿ, ಕೊಲೆ ಯತ್ನ ಸೇರಿದಂತೆ ಅನ್ವಯವಾಗುವ ಕಠಿಣ ಕಾನೂನು ವಿಧಿಗಳ ಅಡಿಯಲ್ಲಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ಕರ್ತವ್ಯ ಲೋಪ ಎಸಗಿರುವ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ, ನಿಷ್ಪಕ್ಷಪಾತ ಇಲಾಖಾ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಪ್ರಕರಣದ ಕುರಿತು ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸಿ, ಘಟನೆಗೆ ಕಾರಣರಾದ ಎಲ್ಲ ತಪ್ಪಿತಸ್ಥರನ್ನು ಕಾನೂನಿನ ಮುಂದೆ ತಂದು ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಶ್ರೀ ಹರಳಯ್ಯ ಸ್ವಾಮೀಜಿಯವರಿಗೆ ಸೂಕ್ತ ಭದ್ರತೆ ಒದಗಿಸಿ, ಇಂತಹ ಘಟನೆಗಳು ಮರುಕಳಿಸದಂತೆ ರಾಜ್ಯ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ಹಾಗೂ ಪೊಲೀಸ್ ಇಲಾಖೆ ತಕ್ಷಣ ಪರಿಣಾಮಕಾರಿ ಕ್ರಮ ಕೈಗೊಳ್ಳದಿದ್ದಲ್ಲಿ, ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ) ವತಿಯಿಂದ ಕಾನೂನುಬದ್ಧ ಹಾಗೂ ಪ್ರಜಾಪ್ರಭುತ್ವದ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ನಾಗರಾಜ ಕಬಾಡೆ ಎಚ್ಚರಿಸಿದ್ದಾರೆ.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಹಳೆಯ ವಿದ್ಯಾರ್ಥಿಗಳಿಂದ ಕೆ.ಎಸ್.ಪಿ. ಮಂಡಳ ಅಧ್ಯಕ್ಷರಿಗೆ ಗೌರವ ಸನ್ಮಾನ



**ಭಾಲ್ಕಿ: ಜು.10:** ಕಲ್ಯಾಣ ಕರ್ನಾಟಕ ಭಾಗದ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬ ಮಹತ್ತರ ಆಶಯದೊಂದಿಗೆ ಐದು ದಶಕಗಳ ಹಿಂದೆ ದಿವಂಗತ ಬಾಬಾರಾವ ಪಾಟೀಲ್ ಶಿಂದೆ ಅವರು ಸ್ಥಾಪಿಸಿದ ಕಿಸಾನ್ ಶಿಕ್ಷಣ ಪ್ರಸಾರಕ ಮಂಡಳ ಇಂದು ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಿದ್ದು, ಈ ಭಾಗದ ಶಿಕ್ಷಣ ಕ್ಷೇತ್ರಕ್ಕೆ ಅವರ ಕೊಡುಗೆ ಅಪಾರವಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಅನೀಲ ಬಿ. ಶಿಂದೆ ಹೇಳಿದರು.

ಪಟ್ಟಣದ ಶಿವಾಜಿ ಮಹಾವಿದ್ಯಾಲಯದಲ್ಲಿ 1998ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ವತಿಯಿಂದ ಆಯೋಜಿಸಿದ್ದ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡಿದ ಸಾವಿರಾರು ವಿದ್ಯಾರ್ಥಿಗಳು ಇಂದು ವಿವಿಧ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜದಲ್ಲಿ ಉತ್ತಮ ಸ್ಥಾನಮಾನ ಗಳಿಸಿದ್ದಾರೆ. ಅವರ ಯಶಸ್ಸಿನ ಹಿಂದೆ ಈ ಶಿಕ್ಷಣ ಸಂಸ್ಥೆಯ ಶಿಸ್ತು, ಗುಣಮಟ್ಟದ ಶಿಕ್ಷಣ ಹಾಗೂ ಮೌಲ್ಯಾಧಾರಿತ ಸಂಸ್ಕಾರಗಳ ಪಾತ್ರವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಹಿರಿಯರು ಹಾಕಿಕೊಟ್ಟ ಆದರ್ಶ ಮಾರ್ಗದಲ್ಲೇ ಸಂಸ್ಥೆಯನ್ನು ಮುನ್ನಡೆಸಲಾಗುತ್ತಿದ್ದು, ದಿವಂಗತ ಬಾಬಾರಾವ್ ಹೊನ್ನಾಳಿಕರ್ ಅವರ ತ್ಯಾಗ, ಪರಿಶ್ರಮ ಮತ್ತು ದೂರದೃಷ್ಟಿಯಿಂದ ಸಂಸ್ಥೆ ಇಷ್ಟು ಎತ್ತರಕ್ಕೆ ಬೆಳೆದಿದೆ. ನಮಗೆ ದೊರೆತಿರುವ ಗೌರವ, ಪ್ರತಿಷ್ಠೆ ಮತ್ತು ಸಾಮಾಜಿಕ ಮಾನ್ಯತೆ ಈ ಶಿಕ್ಷಣ ಸಂಸ್ಥೆಯ ಕೊಡುಗೆಯಾಗಿದೆ. ಸಂಸ್ಥೆಯ ಮತ್ತಷ್ಟು ಬೆಳವಣಿಗೆಗೆ ಯುವ ಸಮುದಾಯದ ಸಹಕಾರ ಅತ್ಯಗತ್ಯ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಭಾಲ್ಕಿ ತಾಲೂಕು ಅಧ್ಯಕ್ಷ ದತ್ತು ಕಾಟ್ಕರ್ ಮಾತನಾಡಿ, "ಕಿಸಾನ್ ಶಿಕ್ಷಣ ಪ್ರಸಾರಕ ಮಂಡಳವು ಕೇವಲ ಶಿಕ್ಷಣ ನೀಡುವ ಸಂಸ್ಥೆಯಲ್ಲ; ಸಾವಿರಾರು ಕುಟುಂಬಗಳ ಭವಿಷ್ಯ ರೂಪಿಸಿದ ಜ್ಞಾನ ದೇಗುಲವಾಗಿದೆ. ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದೊಂದಿಗೆ ಸಂಸ್ಕಾರ, ಶಿಸ್ತು ಮತ್ತು ಸಾಮಾಜಿಕ ಜವಾಬ್ದಾರಿಯನ್ನೂ ಬೆಳೆಸಿದ ಅಪರೂಪದ ಶಿಕ್ಷಣ ಸಂಸ್ಥೆಯಾಗಿದೆ.

ಗ್ರಾಮೀಣ ಪ್ರದೇಶದ ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶ ಕಲ್ಪಿಸಿ, ವೈದ್ಯರು, ಇಂಜಿನಿಯರ್‌ಗಳು, ಶಿಕ್ಷಕರು, ಆಡಳಿತಾಧಿಕಾರಿಗಳು ಹಾಗೂ ವಿವಿಧ ಕ್ಷೇತ್ರಗಳ ಸಾಧಕರನ್ನು ಸಮಾಜಕ್ಕೆ ನೀಡಿರುವ ಹೆಗ್ಗಳಿಕೆ ಈ ಸಂಸ್ಥೆಯದು. ಇಂತಹ ಸಂಸ್ಥೆಗಳ ಸೇವೆ ಸಮಾಜಕ್ಕೆ ಸದಾ ಪ್ರೇರಣೆಯಾಗಿದ್ದು, ಅವುಗಳ ಅಭಿವೃದ್ಧಿಗೆ ಹಳೆಯ ವಿದ್ಯಾರ್ಥಿಗಳು ಮತ್ತು ಸಮಾಜದ ಸಹಕಾರ ನಿರಂತರವಾಗಿರಬೇಕು" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ವೆಂಕಟರಾವ್ ನೆಲವಾಡೆ, ಪ್ರತಾಪರಾವ್ ಪಾಟೀಲ್, ಕೃಷ್ಣಕಾಂತ ಶಿಂದೆ, ಅನಂತ ಪಿ. ಪಾಟೀಲ್, ಪ್ರದೀಪ್ ಮನೆ, ಮಾಧವ್ ಜಾಧವ್, ಸುವರ್ಣ ಡಗೆ, ನರಸಿಂಗ್ ಬೊರೋಳೆ , ಸುಶೀಲ್ ಶರ್ಮಾ, ರಾಣಾ ಪ್ರತಾಪ್ ಯಾದವ್, ವಿಶ್ವಂಭರ ಬಿರಾದಾರ್, ವಿಲಾಸ್ ದಾವಲಜಿ, ಕಿರಣ್ ಠಿಗಳೆ, ನೀಲಕಂಠರಾವ್ ಕಾಳೆ ಹಾಗೂ ಆರ್. ಎಂ. ಬಿರಾದಾರ್ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಪ್ರೊ. ಚಂದ್ರಕಾಂತ ಬಿರಾದಾರ್ ನಿರೂಪಿಸಿದರು.

# ಪವಾಡ ಬಸವೇಶ್ವರ ದೇವಸ್ಥಾನದ ಬೆಳ್ಳಿ ಕವಚ ಕಳ್ಳತನ: ಕಳ್ಳರ ಬಂಧನಕ್ಕೆ ನಡಹಳ್ಳಿ ಒತ್ತಾಯ



**ಮುದ್ದೇಬಿಹಾಳ, ಜು. 10:** ತಾಲ್ಲೂಕಿನ ಬಸರಕೋಡದ ಪ್ರಸಿದ್ಧ ಪವಾಡ ಬಸವೇಶ್ವರ ದೇವಸ್ಥಾನದಲ್ಲಿ ನಡೆದ ಬೆಳ್ಳಿ ಕವಚ ಕಳ್ಳತನ ಪ್ರಕರಣವು ಲಕ್ಷಾಂತರ ಭಕ್ತರ ಭಾವನೆಗಳಿಗೆ ಧಕ್ಕೆಯುಂಟು ಮಾಡಿದ್ದು, ಪೊಲೀಸರು ಶೀಘ್ರವೇ ಆರೋಪಿಗಳನ್ನು ಬಂಧಿಸಿ ಕಳುವಾದ ಬೆಳ್ಳಿ ಕವಚವನ್ನು ವಶಪಡಿಸಿಕೊಳ್ಳಬೇಕು ಎಂದು ಮಾಜಿ ಶಾಸಕ ಎ.ಎಸ್. ಪಾಟೀಲ ನಡಹಳ್ಳಿ ಆಗ್ರಹಿಸಿದರು.

ಗುರುವಾರ ದೇವಸ್ಥಾನಕ್ಕೆ ಭೇಟಿ ನೀಡಿ ದೇವಸ್ಥಾನ ಸಮಿತಿಯಿಂದ ಪ್ರಕರಣದ ಮಾಹಿತಿ ಪಡೆದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪವಾಡ ಬಸವೇಶ್ವರ ದೇವಸ್ಥಾನಕ್ಕೆ ಕರ್ನಾಟಕ ಮಾತ್ರವಲ್ಲದೆ ಮಹಾರಾಷ್ಟ್ರದಿಂದಲೂ ಸಾವಿರಾರು ಭಕ್ತರು ಆಗಮಿಸುತ್ತಾರೆ. ಇಂತಹ ಪವಿತ್ರ ಕ್ಷೇತ್ರದಲ್ಲಿ ನಡೆದ ಕಳ್ಳತನ ಅತ್ಯಂತ ಖಂಡನೀಯವಾಗಿದ್ದು, ಇದರಿಂದ ಭಕ್ತರ ಧಾರ್ಮಿಕ ಭಾವನೆಗಳಿಗೆ ನೋವಾಗಿದೆ ಎಂದು ಹೇಳಿದರು.

ಪ್ರಕರಣವನ್ನು ಪೊಲೀಸರು ಗಂಭೀರವಾಗಿ ಪರಿಗಣಿಸಿ ತನಿಖೆಯನ್ನು ತ್ವರಿತಗೊಳಿಸಬೇಕು. ಘಟನೆ ನಡೆದು ನಾಲ್ಕು ದಿನಗಳಾದರೂ ಆರೋಪಿಗಳ ಸುಳಿವು ಸಿಕ್ಕಿಲ್ಲ. ಅಗತ್ಯವಿದ್ದರೆ ವಿಶೇಷ ತನಿಖಾ ತಂಡಗಳನ್ನು ರಚಿಸಿ, ಕಳ್ಳರನ್ನು ಬಂಧಿಸಿ ದೇವರ ಬೆಳ್ಳಿ ಕವಚವನ್ನು ವಶಪಡಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು. ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಎರಡು ಬಾರಿ ಮಾತನಾಡಿದ್ದೇನೆ. ಇನ್ನೂ ಒಂದು ವಾರದೊಳಗೆ ಆರೋಪಿಗಳನ್ನು ಬಂಧಿಸದಿದ್ದರೆ ದೇವಸ್ಥಾನದ ಭಕ್ತರ ಸಭೆ ಕರೆದು ಮುಂದಿನ ಹೋರಾಟದ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ದೇವಸ್ಥಾನದ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸದಿದ್ದ ವಿಚಾರದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಆ ಅಂಶದ ಬಗ್ಗೆಯೂ ಪೊಲೀಸರು ಸಮಗ್ರ ತನಿಖೆ ನಡೆಸಲಿ. ಆದರೆ ಈ ಕೃತ್ಯದಲ್ಲಿ ಸ್ಥಳೀಯರ ಕೈವಾಡ ಇಲ್ಲ ಎಂಬ ವಿಶ್ವಾಸ ನನಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅಧ್ಯಕ್ಷ ಕೆ.ವೈ. ಬಿರಾದಾರ, ಸದಸ್ಯ ಎಸ್.ಎಸ್. ಹಂಡರಗಲ್, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಗಿರೀಶಗೌಡ ಪಾಟೀಲ, ಎಸ್ಸಿ ಮೋರ್ಚಾ ಮುಖಂಡ ಮಂಜುನಾಥ ಚಲವಾದಿ ಸೇರಿದಂತೆ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು. ಸುದ್ದಿಪತ್ರಿಕೆಆನ್ಲೈನ್

# ಎಂಸಿಜಿ ಮೈದಾನದಲ್ಲಿ ಕ್ರಿಕೆಟಿಗರನ್ನು ಭೇಟಿಯಾದ ಮೋದಿ

**ಮೆಲ್ಬೋರ್ನ್, ಜು.10-**ಪ್ರಧಾನಿ ನರೇಂದ್ರ ಮೋದಿ ಅವರು ಮೆಲ್ಬೋರ್ನ್ ಕ್ರಿಕೆಟ್ ಮೈದಾನಕ್ಕೆ ಭೇಟಿ ನೀಡಿ ಯುವ ಕ್ರಿಕೆಟಿಗರೊಂದಿಗೆ ಸಂವಾದ ನಡೆಸಿದರು.ಎಂಸಿಜಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಧಾನಿ ಮೋದಿ, "ಎಂಸಿಜಿಗೆ ಕಾಲಿಡುವುದು ಯಾವುದೇ ಭಾರತೀಯನಿಗೆ ಏಕಕಾಲದಲ್ಲಿ ಎರಡು ಭಾವನೆಗಳನ್ನು ಹುಟ್ಟುಹಾಕುತ್ತದೆ. ಮೊದಲನೆಯದಾಗಿ, ಭಾರತ-ಆಸ್ಟ್ರೇಲಿಯಾ ಪಂದ್ಯದ ರೋಮಾಂಚನ ಮತ್ತು ಎರಡನೆಯದಾಗಿ, ನಮ್ಮ ಎರಡೂ ರಾಷ್ಟ್ರಗಳಲ್ಲಿ, ಕ್ರಿಕೆಟ್ ಕೇವಲ ಕ್ರೀಡೆಯಲ್ಲ, ಆದರೆ ಹಂಚಿಕೆಯ ಉತ್ಸಾಹವಾಗಿದೆ ಎಂಬ ಅರಿವು. ಆದರೂ, ಇಂದು, 'ಕೊನೆಯ ಓವರ್ ಫಿನಿಶ್ ನ ಒತ್ತಡವಿಲ್ಲ. ಬದಲಾಗಿ, ಆಟದ ಸಂತೋಷ, ನಮ್ಮ ಸ್ನೇಹದ ಉಷ್ಣತೆ ಮತ್ತು ಭವಿಷ್ಯದ ಚಾಂಪಿಯನ್ ಗಳ ಶಕ್ತಿ ಮಾತ್ರ ಇದೆ ಎಂದು ಹೇಳಿದರು.ಇದೇ ವೇಳೆ, ಭಾರತ-ಆಸ್ಟ್ರೇಲಿಯಾ ಕ್ರೀಡಾ ಸಹಯೋಗದ ಮಾರ್ಗಸೂಚಿಯನ್ನು ಪ್ರಾರಂಭಿಸುವುದಾಗಿ ಘೋಷಿಸಿದ ಅವರು, ಈ ಉಪಕ್ರಮದ ಮೂಲಕ ನಾವು ಕ್ರಿಕೆಟ್ ನಲ್ಲಿ ಮಾತ್ರವಲ್ಲದೆ ಇತರ ಕ್ರೀಡೆಗಳಲ್ಲಿಯೂ ಸಹಕಾರವನ್ನು ಬಲಪಡಿಸುತ್ತೇವೆ ಎಂದು ಹೇಳಿದರು.

ಜತೆಗೆ ಕ್ರೀಡಾ ತರಬೇತಿ, ಕ್ರೀಡಾ ವಿಜ್ಞಾನ ಮತ್ತು ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ನಾವು ಒಟ್ಟಾಗಿ ಮುಂದುವರಿಯುತ್ತೇವೆ, ಮೈದಾನದ ಒಳಗೆ ಮತ್ತು ಹೊರಗೆ ನಮ್ಮ ಪಾಲುದಾರಿಕೆಯನ್ನು ಬಲಪಡಿಸುತ್ತೇವೆ ಎಂದು ತಿಳಿಸಿದರು."ನನ್ನ ಸ್ನೇಹಿತ ಪ್ರಧಾನಿ ಅಲ್ಬನೀಸ್ ಅವರನ್ನು ಭೇಟಿಯಾಗಲು ನನಗೆ ಅವಕಾಶ ಸಿಕ್ಕಾಗಲೆಲ್ಲಾ, ಕ್ರಿಕೆಟ್ ನಮ್ಮ ನಡುವಿನ ನೈಸರ್ಗಿಕ ಸಂಪರ್ಕ ಬಿಂದುವಾಗಿ ಕಾರ್ಯನಿರ್ವಹಿಸಿದೆ. ನಾವು ಒಟ್ಟಿಗೆ ಅಹಮದಾಬಾದ್ ನ ಕ್ರೀಡಾಂಗಣಕ್ಕೆ ಭೇಟಿ ನೀಡಿದ್ದೇವೆ ಮತ್ತು ಇಂದು ಇಲ್ಲಿರುವುದರಿಂದ, ನಾನು ನಿಜವಾಗಿಯೂ ಕ್ರೀಡಾ ಮನೋಭಾವವನ್ನು ಅನುಭವಿಸಬಲ್ಲೆ. ವಿಶೇಷವಾಗಿ ಸ್ಟೀವ್ ವಾ ಮತ್ತು ಲಿಸಾ ಸ್ಥಾಲೇಕರ್ ಅವರಂತಹ ದಂತಕಥೆಗಳು ನಮ್ಮ ನಡುವೆ ಉಪಸ್ಥಿತರಿದ್ದಾರೆ.ಇದಕ್ಕೂ ಮುನ್ನ ಮೂರು ದಿನಗಳ ಆಸ್ಟ್ರೇಲಿಯಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಅವರು ಶುಕ್ರವಾರ ದೇಶದ ವಿರೋಧ ಪಕ್ಷದ ನಾಯಕ ಆಂಗಸ್ ಟೇಲರ್ ಅವರನ್ನು ಭೇಟಿ ಮಾಡಿ ದ್ವಿಪಕ್ಷೀಯ ಸಂಬಂಧಗಳ ಬಗ್ಗೆ ಚರ್ಚಿಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

# ಪಾದಚಾರಿ ಮಾರ್ಗ ತೆರವು: ಸಿಎಂ ರಿಂದ ಸ್ಥಳ ವೀಕ್ಷಣೆ



**ಬೆಂಗಳೂರು, ಜು.10–** ಮುಖ್ಯಮಂತ್ರಿಯಾದ ಬಳಿಕ ಇದೇ ಮೊದಲ ಬಾರಿಗೆ ನಗರ ಪ್ರದಕ್ಷಿಣೆ ನಡೆಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನ ವಿವಿಧ ಪ್ರಮುಖ ಪ್ರದೇಶಗಳಲ್ಲಿ ಫುಟ್‌ಪಾತ್ ಒತ್ತುವರಿ ತೆರವು ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ಬೆಳಗಾವಿಯಿಂದ ನೇರವಾಗಿ ಹೆಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಮುಖ್ಯಮಂತ್ರಿ ಅಲ್ಲಿಂದಲೇ ನಗರ ಸುತ್ತಾಟ ಆರಂಭಿಸಿದರು. ಮೊದಲಿಗೆ ಹೆಚ್‌ಎಎಲ್ ಮುಂಭಾಗದ ಫುಟ್‌ಪಾತ್ ಕಾಮಗಾರಿಯನ್ನು ವೀಕ್ಷಿಸಿದ ಅವರು, ಬಳಿಕ ದೊಡ್ಡನೆಕ್ಕುಂದಿ ಮೆಟ್ರೊ ಪಿಲ್ಲರ್ ಕೆಳಭಾಗದ ರಸ್ತೆ ಹಾಗೂ ದೊಡ್ಡನೆಕ್ಕುಂದಿ ರಸ್ತೆಯ ಫುಟ್‌ಪಾತ್‌ಗಳ ಸ್ಥಿತಿಯನ್ನು ಪರಿಶೀಲಿಸಿದರು.

ನಂತರ ಔಟರ್ ರಿಂಗ್ ರೋಡ್‌ನ ಬೆಳ್ಳಂದೂರಿನಿಂದ ಇಬ್ಲೂರು ಜಂಕ್ಷನ್‌ವರೆಗೆ ನಿರ್ಮಿಸಿರುವ ಪಾದಚಾರಿ ಮಾರ್ಗವನ್ನು ವೀಕ್ಷಿಸಿದ ಮುಖ್ಯಮಂತ್ರಿ, ಇದೇ ಮಾದರಿಯಲ್ಲಿ ನಗರದ ಇತರೆ ಫುಟ್‌ಪಾತ್‌ಗಳನ್ನೂ ಅಭಿವೃದ್ಧಿಪಡಿಸಿ ಸಮರ್ಪಕವಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಳಿಕ ಹೆಚ್‌ಎಸ್‌ಆರ್ ಲೇಔಟ್‌ಗೆ ತೆರಳಿದ ವೇಳೆ ಕಾರ್ಯಕರ್ತರು ಮುಖ್ಯಮಂತ್ರಿಗೆ ಹೂಮಾಲೆ ಹಾಕಿ ಸ್ವಾಗತಿಸಿದರು. ಅಲ್ಲಿಯೂ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ಪಾದಚಾರಿ ಮಾರ್ಗಗಳ ನಿರ್ವಹಣೆಯನ್ನು ಪರಿಶೀಲಿಸಿದರು.

ಮುಖ್ಯಮಂತ್ರಿಯವರೊಂದಿಗೆ ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೇರಿದಂತೆ ಜಿಬಿಎ ಅಧಿಕಾರಿಗಳು ಉಪಸ್ಥಿತರಿದ್ದರು.

ನಗರದಲ್ಲಿ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆಗೆ ಕೆಲ ಬೀದಿಬದಿ ವ್ಯಾಪಾರಿಗಳು ಅಸಮಾಧಾನ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ, ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿದ ಮುಖ್ಯಮಂತ್ರಿ, ಪಾದಚಾರಿಗಳ ಸುರಕ್ಷತೆಗೆ ಆದ್ಯತೆ ನೀಡುವುದರ ಜೊತೆಗೆ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ನಂತರ ನಂದಿನಿ ಸರ್ಕಲ್ ಬಳಿ ಕೆಂಪೇಗೌಡ ಪುತ್ಥಳಿ.ಯೋಗಿ ವೇಮನ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಸಿಎಂ.ನೇರವಾಗಿ ಬೊಮ್ಮನಹಳ್ಳಿಗೆ ತೆರಳಿದರು.

ಅಲ್ಲಿ ಉಮಾಪತಿಗೌಡ ನೇತೃತ್ವದಲ್ಲಿ ಕಾರ್ಯರ್ತರಿಂದ ಸಿಎಂಗೆ ಸ್ವಾಗತ ಮಾಡಿದರು..ಅಲ್ಲಿ ಕೂಡ ಪುಟ್ ಪಾತ್ ತೆರವು ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಪಾದಚಾರಿ ಮಾರ್ಗ ಸ್ವಚ್ಚತೆ ಕಾಪಾಡಲು ಸೂಚನೆ ನೀಡಿದರು.ಅಲ್ಲಿಂದ ಜಯನಗರ.ಅಶೋಕ ಫೀಲರ್ ಬಳಿ ಒತ್ತುವರಿ ತೆರವು ಕಾರ್ಯ ವೀಕ್ಷಣೆ ನಡೆಸಿ.ಮೆಜೆಸ್ಟಿಕ್ ನ ಧನ್ವಂತರಿ ರಸ್ತೆ.ಮಲ್ಲೇಶ್ವರ ಮುಖ್ಯ ರಸ್ತೆಗಳನ್ನು ವೀಕ್ಷಣೆ ನಡೆಸಿ. ಮುಂದಿನ ದಿನಗಳಲ್ಲಿ ಪಾದಚಾರಿ ಮಾರ್ಗಗಳಲ್ಲಿ ವ್ಯಾಪಾರ ನಡೆಸುವ ವಿರುದ್ಧ ಕ್ರಮ ಕೈಗೊಳ್ಳಲು ಸೂಚನೆ ಕೊಟ್ಟರು.

# ಕೇಂದ್ರ ಸರ್ಕಾರದ ಯೋಜನೆಗಳ ಅರಿವು ಮೂಡಿಸುವ ಕಾರ್ಯಕ್ರಮ



**ವಿಜಯಪುರ,ಜು.10**: ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೆ ತಲುಪಬೇಕು,ಜೊತೆಗೆ ಮಾಹಿತಿಯ ಕೊರತೆಯಿಂದ ಯಾರೂ ಸೌಲಭ್ಯಗಳಿಂದ ವಂಚಿತರಾಗಬಾರದು ಎಂಬ ಹಿನ್ನೆಲೆಯಲ್ಲಿ ವಿಜಯಪುರ ಪಟ್ಟಣದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮಾತನಾಡಿದ ಬಿಜೆಪಿ ತಾಲೂಕು ಅಧ್ಯಕ್ಷ ಅಂಬರೀಶ್ ಗೌಡ, ಕೇಂದ್ರ ಸರ್ಕಾರವು ಸಮಾಜದ ಕಟ್ಟಕಡೆಯ ವ್ಯಕ್ತಿಯ ಏಳಿಗೆಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ.ಆದರೆ ಅನೇಕ ಬಾರಿ ಜನರಿಗೆ ಇದರ ಸರಿಯಾದ ಮಾಹಿತಿ ಇರುವುದಿಲ್ಲ.ಈ ನಿಟ್ಟಿನಲ್ಲಿ ನಮ್ಮ ಕಾರ್ಯಕರ್ತರು ಮನೆ ಮನೆಗೆ ತೆರಳಿ ಸಾರ್ವಜನಿಕರಿಗೆ ಯೋಜನೆಗಳ ಬಗ್ಗೆ ತಿಳಿವಳಿಕೆ ನೀಡುತ್ತಿದ್ದಾರೆ ಎಂದರು.

ಇದೇ ವೇಳೆ ಮಾತನಾಡಿದ ಟೌನ್ ಬಿಜೆಪಿ ಅಧ್ಯಕ್ಷ ವೆಂಕಟೇಶ್ ಪ್ರಭು, ಪ್ರಧಾನಮಂತ್ರಿ ಆವಾಸ್ ಯೋಜನೆ, ಆಯುಷ್ಮಾನ್ ಭಾರತ, ಪಿಎಂ ಕಿಸಾನ್, ಜನಧನ್ ಯೋಜನೆ, ಉಜ್ವಲಾ ಯೋಜನೆ, ಮುದ್ರಾ ಮತ್ತು ವಿಶ್ವಕರ್ಮ ಯೋಜನೆಗಳಂತಹ ಮಹತ್ವದ ಕಾರ್ಯಕ್ರಮಗಳ ಪ್ರಯೋಜನವನ್ನು ಜನರು ಹೇಗೆ ಪಡೆಯಬೇಕು ಎಂಬುದರ ಬಗ್ಗೆ ಸಾರ್ವಜನಿಕರ ಸಂದೇಹಗಳನ್ನು ನಿವಾರಿಸಲಾಗುತ್ತಿದೆ," ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನೂರಾರು ಜನರು ವಿವಿಧ ಯೋಜನೆಗಳ ಬಗ್ಗೆ ಮಾಹಿತಿ ಪಡೆದುಕೊಂಡು,ತಮ್ಮ ಪ್ರಶ್ನೆಗಳಿಗೆ ಉತ್ತರ ಕಂಡುಕೊಂಡರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ವರದರಾಜು, ಮುಖಂಡರಾದ ಚಂದ್ರಶೇಖರ್, ಮುನಿಕೃಷ್ಣ, ರಾಘವ, ಪ್ರಕಾಶ್, ಪ್ರಭು, ದಿನೇಶ್, ನಟರಾಜ್, ಸುಬ್ಬಣ್ಣ, ವೀಣಾ, ತಾಯಮ್ಮ, ಪ್ರೇಮ, ಭಾಗ್ಯಮ್ಮ ಸೇರಿದಂತೆ ಹಲವು ಕಾರ್ಯಕರ್ತರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಪ್ರಶಸ್ತಿ ಪುರಸ್ಕೃತ ಭೀಮಸೇನ ಕೊಕರೆಗೆ ದ್ರಾಕ್ಷಿ ಬೆಳೆಗಾರರ ಸಂಘದಿಂದ ಸನ್ಮಾನ

**ವಿಜಯಪುರ, ಜು. 10:** ಕೃಷಿ ಹಾಗೂ ಕ್ರೀಡಾ ಕ್ಷೇತ್ರಗಳಲ್ಲಿ ಸಲ್ಲಿಸಿದ ವಿಶಿಷ್ಟ ಸೇವೆಯನ್ನು ಗುರುತಿಸಿ, ಬಬಲೇಶ್ವರದ ಭೀಮಸೇನ ಕೊಕರೆ ಅವರಿಗೆ ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನದಿಂದ ರಾಜ್ಯಮಟ್ಟದ ಪ್ರಶಸ್ತಿ ಲಭಿಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ದ್ರಾಕ್ಷಿ ಬೆಳೆಗಾರರ ಸಂಘದ ವತಿಯಿಂದ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು.



ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಡಾ. ಕೆ.ಎಚ್. ಮುಂಬಾರೆಡ್ಡಿ ಮಾತನಾಡಿ, ಕೃಷಿ ಮತ್ತು ಕ್ರೀಡಾ ಕ್ಷೇತ್ರಗಳಲ್ಲಿ ಭೀಮಸೇನ ಕೊಕರೆ ಅವರು ಸಲ್ಲಿಸಿರುವ ಸೇವೆ ಯುವ ಜನತೆಗೆ ಮಾದರಿಯಾಗಿದೆ. ಅವರಿಗೆ ಲಭಿಸಿರುವ ರಾಜ್ಯಮಟ್ಟದ ಪ್ರಶಸ್ತಿ ವಿಜಯಪುರ ಜಿಲ್ಲೆ ಹಾಗೂ ರೈತ ಸಮುದಾಯದ ಗೌರವವನ್ನು ಇನ್ನಷ್ಟು ಎತ್ತರಕ್ಕೇರಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಂದೆಯೂ ಇದೇ ರೀತಿಯ ಸಾಧನೆಗಳನ್ನು ಮುಂದುವರಿಸಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಮತ್ತಷ್ಟು ಕೀರ್ತಿ ತಂದುಕೊಡಲಿ ಎಂದು ಹಾರೈಸಿದ ಅವರು, ವೈಯಕ್ತಿಕವಾಗಿ ಹಾಗೂ ಸಂಘದ ಪರವಾಗಿ ಭೀಮಸೇನ ಕೊಕರೆ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಎಚ್.ಆರ್. ಉಟಗಿ, ವಕೀಲ ಹಾಗೂ ಸಂಘದ ಉಪಾಧ್ಯಕ್ಷ ಎಸ್.ಎಚ್. ಛಾಯಾಗೋಳ, ಖಜಾಂಚಿ ವಾಮನ್ ಮಹಿಷಿ, ವಿಶ್ವನಾಥ ಚೆನ್ನಾಳ, ಮಲ್ಲಪ್ಪ ತುಂಗಳ, ಉಮೇಶ ಮಲ್ಲನ್ನವರ, ಶ್ರೀಶೈಲಗೌಡ ಪಾಟೀಲ, ಮಹಾವೀರ ಕುಸನಾಳ, ಸುರೇಶ ಬಿರಾದಾರ, ಅಶೋಕ ಬಾಲಗಾಂವ ಸೇರಿದಂತೆ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

# ಎಸ್‌ಐಆರ್ ಮತದಾರರ ಪಟ್ಟಿ ಪರಿಷ್ಕರಣಾ ಪ್ರಕ್ರಿಯೆಯನ್ನು ರಾಜಕೀಯ ಗೊಳಿಸುತ್ತಿರುವುದು ಖಂನಿಯ: ಡಾ. ಮೊಹಮ್ಮದ್ ಅಸ್ಗರ್ ಚುಲ್ಬುಲ್



**ಕಲಬುರಗಿ,** ನಗರದ ರೋಜಾ ದರ್ಗಾ ಪ್ರದೇಶದಲ್ಲಿರುವ ಖಾಸಗಿ ನಿವಾಸದಲ್ಲಿ ನಡೆದ ನಿನ್ನೆ ನಡೆದಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ (ಕುಡಾ) ಮಾಜಿ ಅಧ್ಯಕ್ಷರು ಮತ್ತು ಆಲ್ ಇಂಡಿಯಾ ಮಿಲ್ಲಿ ಕೌನ್ಸಿಲ್‌ನ (ಎಐಎಂಸಿ) ರಾಷ್ಟ್ರೀಯ ಅಂತರಧರ್ಮೀಯ ವಿಭಾಗದ ಕಾರ್ಯದರ್ಶಿ ಡಾ. ಮೊಹಮ್ಮದ್ ಅಸ್ಗರ್ ಚುಲ್ಬುಲ್ ಅವರು, ಕರ್ನಾಟಕದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಪರಿಷ್ಕರಣಾ (ಎಸ್ ಐ ಆರ್) ಪ್ರಕ್ರಿಯೆಯ ಕುರಿತು ಬಿಜೆಪಿ ಮತ್ತು ಎನ್‌ಡಿಎ ನಾಯಕರು ಮಾಡುತ್ತಿರುವ ಇತ್ತೀಚಿನ ಆರೋಪಗಳು ರಾಜೀಯ ಪ್ರೇರಿತವಾಗಿದ್ದು, ಆಯೋಗ ಮತ್ತು ಸಾರ್ವಜನಿಕರ ದಾರಿ ತಪ್ಪಿಸುವುದಾಗಿದೆ ಎಂದರು

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಮತ್ತು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ಇತ್ತೀಚಿನ ಹೇಳಿಕೆಗಳು ಕೇವಲ ರಾಜಕಿಯ ಪ್ರೇರಿತವಾಗಿವೆ ಎಂದು ಡಾ. ಚುಲ್ಬುಲ್ ಖಂಡಿಸಿದರು.

ಅಲ್ಪಸಂಖ್ಯಾತ ಸಮುದಾಯ ಮತ್ತು ರಾಜ್ಯ ಸರ್ಕಾರವು ಮಸೀದಿಗಳು ಮತ್ತು ಕಮ್ಯುನಿಟಿ ಹಾಲ್‌ಗಳ ಮೂಲಕ "25 ಲಕ್ಷ ಅಕ್ರಮ ವಲಸಿಗರನ್ನು" ಸೇರಿಸಲು ಸಹಾಯ ಮಾಡುತ್ತಿವೆ ಎಂಬ ಆರೋಪಗಳು ಸಂಪೂರ್ಣವಾಗಿ ಆಧಾರರಹಿತ ಮತ್ತು ಕೋಮುವಾದಿ ಪ್ರೇರಿತ ಎಂದು ಅವರು ಹೇಳಿದರು.

"ಶಾಂತಿಯನ್ನು ಕದಡಲು ಬಿಜೆಪಿ ನಾಯಕರು ಹಿಂದೂ–ಮುಸ್ಲಿಂ ಕಾರ್ಡ್ ಬಳಸುತ್ತಿರುವುದು ನಾಚಿಕೆಗೇಡಿನ ಸಂಗತಿ. ಅವರು ಸಾಮಾನ್ಯ ಆಡಳಿತಾತ್ಮಕ ಪ್ರಕ್ರಿಯೆಯನ್ನು ಕೋಮುವಾದದ ಮೂಲಕ ವಿಭಜಿಸಲು ಪ್ರಯತ್ನಿಸುತ್ತಿದ್ದಾರೆ. ಬೆಂಗಳೂರಿನಲ್ಲಿ 25 ಲಕ್ಷ ಅಕ್ರಮ ವಲಸಿಗರು ಇದ್ದಾರೆ ಎಂದು ಅವರು ಇದ್ದಕ್ಕಿದ್ದಂತೆ ಹೇಗೆ ಹೇಳಲು ಸಾಧ್ಯ? ಇದು ಕೇವಲ ರಾಜಕೀಯ ನಿರೂಪಣೆಯನ್ನು ಸೃಷ್ಟಿಸುವ ಕೀಳು ಮಟ್ಟದ ತಂತ್ರವಾಗಿದೆ" ಎಂದು ಡಾ. ಚುಲ್ಬುಲ್ ಆಕ್ರೋಶ ವ್ಯಕ್ತಪಡಿಸಿದರು.

ಪಾರದರ್ಶಕತೆ ಮತ್ತು ನಿಯಮ ಪಾಲನೆ ಎಸ್‌ಐಆರ್ (SIR) ಪ್ರಕ್ರಿಯೆಯು ಭಾರತೀಯ ಚುನಾವಣಾ ಆಯೋಗ (ECI) ಮತ್ತು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ (ಅಇಔ) ಕಠಿಣ ಮಾರ್ಗಸೂಚಿಗಳ ಅಡಿಯಲ್ಲಿ ನಡೆಯುತ್ತಿದೆ ಎಂದು ಒತ್ತಿ ಹೇಳಿದ ಡಾ. ಚುಲ್ಬುಲ್, ಮತದಾರರು ದಾಖಲೆಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ, ವಿಶೇಷವಾಗಿ 2002ರ ಮತದಾರರ ಪಟ್ಟಿ ಮತ್ತು ಇತರ ಅಗತ್ಯ ವಿವರಗಳನ್ನು ನಮೂದಿಸಬೇಕು ಎಂದು ಸ್ಪಷ್ಟಪಡಿಸಿದರು. ಈ ಪ್ರಕ್ರಿಯೆಯು ಪಾರದರ್ಶಕವಾಗಿದ್ದು, ಮತದಾರರು ತಮ್ಮ ಸಾಂವಿಧಾನಿಕ ಹಕ್ಕುಗಳನ್ನು ಚಲಾಯಿಸುತ್ತಿದ್ದಾರೆ ಎಂದು ಅವರು ಹೇಳಿದರು.

"ಬಿಜೆಪಿಯವರಿಗೆ ಮುಸ್ಲಿಮರು ಮತ್ತು ಇತರ ಅಲ್ಪಸಂಖ್ಯಾತರು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಇಷ್ಟವಿಲ್ಲ, ಅದಕ್ಕಾಗಿಯೇ ಅವರು ಭಯಭೀತರಾಗಿದ್ದಾರೆ. ಅಲ್ಪಸಂಖ್ಯಾತ ಮತದಾರರ ಹೆಸರುಗಳನ್ನು ಸಾಮೂಹಿಕವಾಗಿ ತೆಗೆದುಹಾಕುವುದೇ ಅವರ ನಿಜವಾದ ಉದ್ದೇಶವಾಗಿದೆ. ಈ ಆಧಾರರಹಿತ ಆರೋಪಗಳನ್ನು ಕಡೆಗಣಿಸಿ, ಪ್ರತಿಯೊಬ್ಬ ನಾಗರಿಕನ ಪ್ರಜಾಸತ್ತಾತ್ಮಕ ಹಕ್ಕುಗಳನ್ನು ರಕ್ಷಿಸಬೇಕೆಂದು ನಾನು ಚುನಾವಣಾ ಆಯೋಗವನ್ನು ಒತ್ತಾಯಿಸುತ್ತೇನೆ" ಎಂದು ಅವರು ಆಗ್ರಹಿಸಿದರು.

ಜಾಗರೂಕತೆ ಮತ್ತು ಸಹಕಾರಕ್ಕಾಗಿ ಮನವಿ

ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಕೇರಳದಂತಹ ರಾಜ್ಯಗಳಲ್ಲಿ ಮತದಾರರ ಹೆಸರುಗಳನ್ನು ತೆಗೆದುಹಾಕಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಡಾ. ಚುಲ್ಬುಲ್, ಕರ್ನಾಟಕದ ಜನರು ಜಾಗರೂಕರಾಗಿರಬೇಕು ಮತ್ತು ವಿರೋಧ ಪಕ್ಷದ ಪ್ರಚೋದನಕಾರಿ ಮಾತುಗಳಿಗೆ ಮಣಿಯಬಾರದು ಎಂದು ಸಲಹೆ ನೀಡಿದರು. ಅವರು ನಾಗರಿಕರಿಗೆ ಈ ಕೆಳಗಿನಂತೆ ಸೂಚಿಸಿದರು:

ನಿಗದಿತ ಅವಧಿಯೊಳಗೆ ಎಚ್ಚರಿಕೆಯಿಂದ ಎನ್ಯುಮರೇಷನ್ (Enumeration) ಫಾರ್ಮ್ಗಳನ್ನು ಭರ್ತಿ ಮಾಡಿ. ಫಾರ್ಮ್ಗಳನ್ನು ಸಲ್ಲಿಸಿದ ನಂತರ ಅಧಿಕೃತ ಸ್ವೀಕೃತಿ ಪತ್ರವನ್ನು ಪಡೆಯಿರಿ. ಬೂತ್ ಮಟ್ಟದ ಅಧಿಕಾರಿಗಳ (BLO) ಮೇಲೆ ಬೀಳುವ ಯಾವುದೇ ಬಾಹ್ಯ ಒತ್ತಡದ ಬಗ್ಗೆ ಎಚ್ಚರದಿಂದಿರಿ. ಎಸ್‌ಐಆರ್ ಪ್ರಕ್ರಿಯೆಯನ್ನು ರಾಜಕೀಯ ಲಾಭಕ್ಕಾಗಿ ಧ್ರುವೀಕರಿಸುವ ಬದಲು, ಬಿಜೆಪಿ ನಾಯಕರು ಮತದಾರರ ಸುರಕ್ಷತೆಗಾಗಿ ಕೆಲಸ ಮಾಡಬೇಕು ಮತ್ತು ಕರ್ನಾಟಕದ ಜನತೆಗೆ ಬೆಂಬಲ ನೀಡಬೇಕು" ಎಂದು ಅವರು ಹೇಳಿದರು.

ಧಾರ್ಮಿಕ ಮತ್ತು ಸಾಮಾಜಿಕ ಮುಖಂಡರ ಉಪಸ್ಥಿತಿ ಈ ಪತ್ರಿಕಾಗೋಷ್ಠಿಯಲ್ಲಿ ಎಐಎಂಸಿ (AIMC) ಜಿಲ್ಲಾಧ್ಯಕ್ಷ ಮೌಲಾನಾ ಗೌಸುದ್ದೀನ್ ಖಾಸ್ಮಿ, ಪ್ರಧಾನ ಕಾರ್ಯದರ್ಶಿ ಮೌಲಾನಾ ಶಫೀಕ್ ಅಹ್ಮದ್ ಖಾಸ್ಮಿ, ಸಮುದಾಯದ ಮುಖಂಡ ಜಾವೇದ್ ಜಾಗೀರ್ದಾರ್, ಶೇಖ್ ಹಮೀದ್ ಮತ್ತು ಇತರರು ಉಪಸ್ಥಿತರಿದ್ದರು.

ಡಾ. ಚುಲ್ಬುಲ್ ಅವರು ಶಾಂತಿಯುತ ಮತ್ತು ಪಾರದರ್ಶಕ ಪ್ರಜಾಸತ್ತಾತ್ಮಕ ಭಾಗವಹಿಸುವಿಕೆಯ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ರಾಜಕೀಯ ಹಿತಾಸಕ್ತಿಗಳಿಗಾಗಿ ಜನರ ಮತದಾನದ ಹಕ್ಕನ್ನು ಕಸಿದುಕೊಳ್ಳದಂತೆ ಎಚ್ಚರಿಕೆ ವಹಿಸಲು ಮತ್ತು ಒಗ್ಗಟ್ಟಿನಿಂದ ಇರುವಂತೆ ಸಾರ್ವಜನಿಕರಿಗೆ ಕರೆ ನೀಡಿದರು.

# ಹೆಣ್ಣುಮಕ್ಕಳು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲಿ

**ಬೀದರ್:ಜು.10:** ಹೆಣ್ಣುಮಕ್ಕಳು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಜಿಲ್ಲಾ ಪದವಿಪೂರ್ವ ಉಪನ್ಯಾಸಕರ ಸಂಘದ ಪ್ರಧಾನ ಕಾರ್ಯದರ್ಶಿ ಸೂರ್ಯಕಾಂತ ಐನಾಪುರೆ ಹೇಳಿದರು.ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದಲ್ಲಿ ಬುಧವಾರ ನಡೆದ ಎಂ.ಎ. ಕನ್ನಡ, ಅರ್ಥಶಾಸ್ತ್ರ, ಎಂ.ಕಾಂ. ಹಾಗೂ ಬಿ.ಎಸ್ಸಿ ಗಣಿತ ವಿಭಾಗದ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಹೆಣ್ಣುಮಕ್ಕಳು ತಾವು ಕಲಿತ ವಿದ್ಯೆಯನ್ನು ವ್ಯರ್ಥ ಮಾಡಿಕೊಳ್ಳಬಾರದು. ಅದನ್ನು ಇತರರಿಗೆ ಧಾರೆ ಎರೆಯಬೇಕು ತಿಳಿಸಿದರು.ಶ್ರೀ ಚಂದ್ರಪ್ಪ ಗೌರಶೆಟ್ಟಿ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಡಾ. ಚಂದ್ರಪ್ಪ ಭತಮುರ್ಗೆ ಮಾತನಾಡಿ, ಅಕ್ಕ ಮಹಾದೇವಿ ಸಮಾಜದ ಉದ್ಧಾರಕ್ಕೆ ತಮ್ಮ ಬದುಕು ಮೀಸಲಾಗಿಟ್ಟಿದ್ದರು. ವಿದ್ಯಾರ್ಥಿಯರು ಯಾವುದೇ ಕಾಯಕ ಮಾಡಿದರೂ, ಭಕ್ತಿ, ಶ್ರದ್ಧೆಯಿಂದ ಮಾಡಬೇಕು ಎಂದು ಹೇಳಿದರು.

ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನ ಪ್ರಾಚಾರ್ಯ ನಾಗಪ್ಪ ಜಾನಕನೋರ ಮಾತನಾಡಿ, ಸ್ನಾತಕೋತ್ತರ ಪದವಿ ಪಡೆದ ಹೆಣ್ಣುಮಕ್ಕಳಿಗೆ ಬಹಳಷ್ಟು ಅವಕಾಶಗಳು ಇವೆ. ಮಹಿಳೆಯರು ಅವುಗಳ ಸದುಪಯೋಗ ಪಡೆದು, ಸಮಾಜದಲ್ಲಿ ತಮ್ಮದೇ ಆದ ಛಾಪು ಮೂಡಿಸಬೇಕು ಎಂದು ಹೇಳಿದರು.ಅಧ್ಯಕ್ಷತೆ ವಹಿಸಿದ್ದ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಡಾ. ಆರ್.ವಿ. ಗಂಗಶೆಟ್ಟಿ ಮಾತನಾಡಿ, ಸ್ನಾತಕೋತ್ತರ ಪದವಿ ಪೂರೈಸಿದ ಹೆಣ್ಣುಮಕ್ಕಳಿಗೆ ಸಂಶೋಧನೆಗೆ ಹೆಚ್ಚಿನ ಅವಕಾಶಗಳು ಇವೆ ಎಂದು




ತಿಳಿಸಿದರು.ಹೆಣ್ಣುಮಕ್ಕಳು ಉನ್ನತ ಶಿಕ್ಷಣ ಪಡೆಯುವ ಜತೆಗೆ, ಜ್ಞಾನ ಹಾಗೂ ಕೌಶಲ ಹೆಚ್ಚಿಸಿಕೊಳ್ಳಬೇಕು ಎಂದು ತಿಳಿಸಿದರು.ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯವು ಹೆಣ್ಣುಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುತ್ತಿದೆ. ಮಹಿಳಾ ಸಬಲೀಕರಣಕ್ಕೆ ಶ್ರಮಿಸುತ್ತಿದೆ ಎಂದು ಹೇಳಿದರು.ಉಪನ್ಯಾಸಕರಾದ ಡಾ. ಪಂಡಿತ, ಡಾ. ಸಂಗಪ್ಪ ತೌಡಿ, ಈಶ್ವರ ರೆಡ್ಡಿ, ಶ್ರೀಲತಾ, ಪ್ರೇಮಲತಾ, ಸಿಬ್ಬಂದಿ ಮನೋಹರ ಶೆಟ್ಟಿ, ಮಹೇಶ, ಲಕ್ಷ್ಮಿ, ಮಲ್ಲಿಕಾರ್ಜುನ ಮತ್ತಿತರರು ಇದ್ದರು.ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಅಂತಿಮ ವರ್ಷದ ವಿದ್ಯಾರ್ಥಿನಿಯರಿಗೆ ಬಹುಮಾನ ವಿತರಿಸಲಾಯಿತು. ಧನಲಕ್ಷ್ಮಿ ನಿರೂಪಿಸಿದರು. ಶ್ರುತಿ ಸ್ವಾಗತಿಸಿದರು. ದೀಪಿಕಾ ವಂದಿಸಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE